

ಸಂಪಾದಕ: ಶಿವಾನಂದ ಜಿ.ಎಂ.
Editor: Shivananda G.M

# ಮೌನ ಕ್ರಾಂತಿ

ಶಾಂತಿಯುತ ಪರಿವರ್ತನೆಗಾಗಿ

ತುಮಕೂರು ಜಿಲ್ಲಾ ಕನ್ನಡ ದಿನಪತ್ರಿಕೆ

MAUNA KRANTI Kannada daily

maunakranti2026@gmail.com
Mob: 99641 75853

Volume: 01 ಸಂಪುಟ: 01 | Issue: 14 ಸಂಚಿಕೆ: 14 | Date: 15-03-2026 Sunday | PRGI NO:KNKAN/25/A4485 | Page :4 ಪುಟ : 4 Price: 2.00 ಬೆಲೆ: 2.00 ರೂ


# ಸಿದ್ಧಗಂಗಾ ಮಠಕ್ಕೆ ಭೇಟಿ ನೀಡಿದ ಗೃಹ ಸಚಿವ ಜಿ. ಪರಮೇಶ್ವರ್; ಒಳಮೀಸಲಾತಿ ಬಗ್ಗೆ ಮಹತ್ವದ ಘೋಷಣೆ!

ಮೌನ ಕ್ರಾಂತಿ ನ್ಯೂಸ್

ತುಮಕೂರು: ತುಮಕೂರಿನ ಸುಪ್ರಸಿದ್ಧ ಸಿದ್ಧಗಂಗಾ ಮಠಕ್ಕೆ ಇಂದು ಬೆಳ್ಳಂಬೆಳಗ್ಗೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಭೇಟಿ ನೀಡಿದರು. ನಡೆದಾಡುವ ದೇವರು ಲಿಂಗೈಕ್ಯ ಶ್ರೀ ಶಿವಕುಮಾರ ಸ್ವಾಮೀಜಿಗಳ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿದ ಸಚಿವರು, ಬಳಿಕ ಮಠದ ಅಧ್ಯಕ್ಷರಾದ ಶ್ರೀ ಸಿದ್ಧಲಿಂಗ ಸ್ವಾಮೀಜಿಗಳನ್ನು ಭೇಟಿಯಾಗಿ ಆಶೀರ್ವಾದ ಪಡೆದರು.

**ಮೈಸೂರಿನಲ್ಲಿ 50 ಕೋಟಿ ವೆಚ್ಚದ ಶೈಕ್ಷಣಿಕ ಸಾಹಸ**

ಶ್ರೀಗಳೊಂದಿಗೆ ಮಾತುಕತೆ ನಡೆಸುವ ವೇಳೆ ಸಚಿವರು ತಮ್ಮ ಶೈಕ್ಷಣಿಕ ಸೇವೆಯ ಬಗ್ಗೆ ಪ್ರಸ್ತಾಪಿಸಿದರು. ಮೈಸೂರಿನ ಪ್ರವೇಶ ದ್ವಾರದಲ್ಲಿ 'ಕ್ವೆಸ್ಟ್ ಅಕಾಡೆಮಿ' ಹೆಸರಿನ ಇಂಗ್ಲಿಷ್ ಮೀಡಿಯಂ ಶಾಲೆಯನ್ನು ಸುಮಾರು 40 ರಿಂದ 50 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವುದಾಗಿ ತಿಳಿಸಿದರು.

ಹೋಟೆಲ್ ಮ್ಯಾನೇಜ್ಮೆಂಟ್ ಮಾಡ್ಕೊಬೇಕಿತ್ತು ಶಾಲೆ ಮಾಡಿದೆವು: ಮೈಸೂರಿನಲ್ಲಿ ಇಂಗ್ಲಿಷ್ ಮಿಡಿಯಂ ಸ್ಕೂಲ್ ಮಾಡಿದ್ದೀರಾ? ಎಂದು ಪ್ರಶ್ನಿಸಿದ ಸಿದ್ದಲಿಂಗ ಸ್ವಾಮೀಜಿ. ಇದಕ್ಕೆ ಪರಮೇಶ್ವರ್ ಅವರು, ಕಳೆದ ವರ್ಷವೇ ಮಾಡಿದ್ವಿ. ಮೈಸೂರಿಗೆ ಹೋಗುವ ಎಂಟ್ರೆಸ್ ನಲ್ಲಿ ಕ್ವೆಸ್ಟ್ ಅಕಾಡಿಮೆ ಅಂತ ಮಾಡಿದ್ದೇವಿ.

**ದೊಡ್ಡದಾಗಿ ಮಾಡಿದ್ದೀರಾ? ಪ್ರಶ್ನಿಸಿದ ಸ್ವಾಮೀಜಿ,**

40–50 ಕೋಟಿ ಖರ್ಚು ಮಾಡಿ ಕಟ್ಟಿದ್ದೀವಿ. ನಮ್ದು ಸ್ವಲ್ಪ ಕಾನ್ವೆಂಟ್ ಎಜ್ಯೂಕೇಷನ್ ಇರಲಿಲ್ಲ. ನಮ್ಮವೆಲ್ಲಾ ಹಳ್ಳಿ ಶಾಲೆಗಳು. ಅಲ್ಲಿ ಒಂದೇರಡು ಎಕರೆ ಜಾಗ ಇತ್ತು ನಮ್ಮದು. ಅಂತವುಗಳಿಗೆ ಎರಡು ಎಕರೆ ಸಾಲಲ್ಲ, 10–20 ಎಕರೆ ಇರ್ಬೇಕು. ಮೊದಲಿಗೆ ಹೋಟೆಲ್ ಮ್ಯಾನೇಜ್ಮೆಂಟ್ ಮಾಡೋಣ ಅನ್ಕೊಂಡೆ, ಮೈಸೂರಿನಲ್ಲಿ ನಡೆಯುತ್ತೊ ಇಲ್ವೋ ಅಂತ ಶಾಲೆ ಮಾಡಿದೆವು ಎಂದು ಸಚಿವರು ಶ್ರೀಗಳ ಮುಂದೆ ಹಂಚಿಕೊಂಡರು.



**ತಂದೆ ಕಾಲದಿಂದಲೂ ಶ್ರೀಮಠಕ್ಕೆ ನಡೆದುಕೊಳ್ತೇವೆ:**

ಮಠದ ಭೇಟಿಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಪರಮೇಶ್ವರ್, 'ನಮ್ಮ ಕುಟುಂಬ ತಂದೆಯ ಕಾಲದಿಂದಲೂ ಶ್ರೀಮಠಕ್ಕೆ ನಡೆದುಕೊಳ್ಳುತ್ತಿದೆ. ಮಠ ನಮಗೆ ಮನಶಾಂತಿ ಮತ್ತು ಸ್ಫೂರ್ತಿಯ ಸೆಲೆ. ಶ್ರೀಗಳು ಎಂದಿಗೂ ರಾಜಕೀಯ ಮಾರ್ಗದರ್ಶನ ನೀಡುವುದಿಲ್ಲ; ನಾವು ರಾಜಕೀಯ ಪ್ರಸ್ತಾಪ ಮಾಡಿದರೂ ಅವರು ಮೌನವಾಗಿ ನಕ್ಕುಬಿಡುತ್ತಾರೆ. ಇಂದು ಎಸ್ಎಸ್ಎಲ್‌ಸಿ ಪರೀಕ್ಷೆ ಬರೆಯುತ್ತಿರುವ ಮಠದ 1200 ವಿದ್ಯಾರ್ಥಿಗಳಿಗೆ ಶುಭ ಕೋರಿದ್ದೇನೆ' ಎಂದರು.

**ಒಳಮೀಸಲಾತಿ, 50 ಸಾವಿರ ಹುದ್ದೆಗಳ ಬಗ್ಗೆ ಗೃಹ ಸಚಿವರು ಹೇಳಿದ್ದೇನು?**

ರಾಜ್ಯದ ನಿರುದ್ಯೋಗಿಗಳಿಗೆ ಸಚಿವರು ದೊಡ್ಡ ಭರವಸೆ ನೀಡಿದ್ದಾರೆ. 'ಒಳಮೀಸಲಾತಿ ವಿಚಾರವಾಗಿ ಮಾರ್ಚ್ 28ರಂದು ಮುಖ್ಯಮಂತ್ರಿಗಳು ವಿಶೇಷ ಸಭೆ ಕರೆದಿದ್ದಾರೆ. ಅಂದು ಈ ಸಮಸ್ಯೆ ಬಗೆಹರಿಯುವ ವಿಶ್ವಾಸವಿದೆ. ಸರ್ಕಾರದ ಆದೇಶ ಹೊರಬಿದ್ದ ತಕ್ಷಣ 50 ಸಾವಿರ ಹುದ್ದೆಗಳ ಆಯ್ಕೆ ಪ್ರಕ್ರಿಯೆ ಆರಂಭವಾಗಲಿದೆ. ಇದರಲ್ಲಿ ಪೊಲೀಸ್ ಇಲಾಖೆಯ 8 ಸಾವಿರ ಹುದ್ದೆಗಳೂ ಸೇರಿವೆ ಎಂದು ಅವರು ಸ್ಪಷ್ಟಪಡಿಸಿದರು.

**ಎತ್ತಿನಹೊಳೆ ಯೋಜನೆ: ವಡೇರಹಳ್ಳಿಯಲ್ಲೇ ಬಫರ್ ಡ್ಯಾಂ**

ಎತ್ತಿನಹೊಳೆ ಯೋಜನೆಯ ಬಗ್ಗೆ ಮಾತನಾಡಿದ ಸಚಿವರು, "ಹಿಂದಿನ ಬಿಜೆಪಿ ಸರ್ಕಾರ ಪ್ಲಾನ್ ಬದಲಿಸಿತ್ತು, ಆದರೆ ನಮ್ಮ ಸರ್ಕಾರ ಮೂಲ ಯೋಜನೆಯಂತೆ ವಡೇರಹಳ್ಳಿಯಲ್ಲೇ ಬಫರ್ ಡ್ಯಾಂ ನಿರ್ಮಿಸಲಿದೆ. ತುಮಕೂರು ಮತ್ತು ಚಿಕ್ಕಬಳ್ಳಾಪುರ ಗಡಿ ಭಾಗದ ಸುಮಾರು 5 ಸಾವಿರ ಎಕರೆಯಲ್ಲಿ ಈ ಡ್ಯಾಂ ನಿರ್ಮಾಣವಾಗಲಿದ್ದು, 1.5 ಟಿಎಂಸಿ ನೀರು ಸಂಗ್ರಹಿಸಲಾಗುವುದು. ಸ್ಥಳೀಯ ರೈತರ ವಿರೋಧವಿದ್ದರೆ ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪರ್ಯಾಯ ವ್ಯವಸ್ಥೆ ಕಲ್ಪಿಸುತ್ತೇವೆ' ಎಂದರು.

**ಸಿಲಿಂಡರ್ ಕೊರತೆ ಇಲ್ಲ, ಕಾಳಸಂತೆಕೋರರಿಗೆ ಎಚ್ಚರಿಕೆ**

ಅಂತರಾಷ್ಟ್ರೀಯ ಬಿಕ್ಕಟ್ಟಿನ ನಡುವೆಯೂ ಗ್ಯಾಸ್ ಪೂರೈಕೆಯಲ್ಲಿ ತೊಂದರೆಯಿಲ್ಲ ಎಂದು ಸಚಿವರು ಭರವಸೆ ನೀಡಿದರು. 'ಹಾರ್ಮೋಸ್ ಸ್ಟ್ರೀಟ್‌ನಿಂದ ಭಾರತದ ಹಡಗುಗಳಿಗೆ ಮುಕ್ತ ಅವಕಾಶವಿರುವುದರಿಂದ ಪೆಟ್ರೋಲ್ ಮತ್ತು ಗ್ಯಾಸ್ ಪೂರೈಕೆ ಸುಗಮವಾಗಿದೆ. ತುಮಕೂರಿನಲ್ಲಿ ಗೃಹ ಬಳಕೆಯ ಸಿಲಿಂಡರ್ ಕೊರತೆ ಇಲ್ಲ. ಒಂದು ವೇಳೆ ಯಾರಾದರೂ ಸಿಲಿಂಡರ್ ದಾಸ್ತಾನು ಮಾಡಿ ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು' ಎಂದು ಎಚ್ಚರಿಸಿದರು.

**ಕುಡಿಯುವ ನೀರಿನ ಸಮಸ್ಯೆ, ಹೇಮಾವತಿ ನೀರು**

ಜಿಲ್ಲೆಯಲ್ಲಿ ಸದ್ಯಕ್ಕೆ ಟ್ಯಾಂಕರ್ ಮೂಲಕ ನೀರು ಕೊಡುವ ಪರಿಸ್ಥಿತಿ ಬಂದಿಲ್ಲ. ಆದರೆ ಬುಗುಡನಹಳ್ಳಿ ಕೆರೆ ಡೆಡ್ ಸ್ಟೋರೇಜ್ ತಲುಪಿರುವುದರಿಂದ ಮುನ್ನೆಚ್ಚರಿಕೆ ವಹಿಸಲಾಗಿದೆ. 'ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರ ಬಳಿ 1.5 ಟಿಎಂಸಿ ಹೇಮಾವತಿ ನೀರು ಬಿಡುವಂತೆ ಮನವಿ ಮಾಡಿದ್ದೇವೆ. ಆ ನೀರು ಬಂದರೆ ಮೇ ತಿಂಗಳವರೆಗೆ ಜಿಲ್ಲೆಗೆ ನೀರಿನ ತೊಂದರೆ ಇರುವುದಿಲ್ಲ' ಎಂದು ಪರಮೇಶ್ವರ್ ಮಾಹಿತಿ ನೀಡಿದರು.


ಮೌನ ಕ್ರಾಂತಿ ಕನ್ನಡ ದಿನ ಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ: 9449499938


# 8 ವರ್ಷಗಳಿಂದ ಅಭಿವೃದ್ಧಿ ಕಾಣದೆ ಉಳಿದ ಬಾಲಕಿಯರ ವಸತಿ ನಿಲಯ

ಮೌನ ಕ್ರಾಂತಿ ನ್ಯೂಸ್

ತುಮಕೂರು: ಜಿಲ್ಲೆಯ ಕೊರಟಗೆರೆ ತಾಲೂಕಿನ ಅಕ್ಕಿರಾಂಪುರ ಗ್ರಾಮದಲ್ಲಿ69 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗಿರುವ ಬಾಲಕಿಯರ ವಸತಿ ನಿಲಯ 8 ವರ್ಷಗಳಿಂದ ಖಾಲಿಯಾಗಿದೆ. ಗ್ರಾಮಸ್ಥರ ಮೂಢ ನಂಬಿಕೆಯಿಂದ ಹೆಣ್ಣುಮಕ್ಕಳು ಹಾಸ್ಟೆಲ್‌ಗೆ ಸೇರುತ್ತಿಲ್ಲ ಎಂಬುದು ಒಂದು ವಾದ. ಆದರೆ, ಸರ್ಕಾರದ ನಿರ್ಲಕ್ಷ್ಯವೇ ಇದಕ್ಕೆ ಕಾರಣ ಎಂದು ಕೆಲವರು ಆರೋಪಿಸುತ್ತಿದ್ದಾರೆ. ಈ ನಿರ್ಲಕ್ಷ್ಯದಿಂದ ಗ್ರಾಮೀಣ ಬಾಲಕಿಯರ ಶಿಕ್ಷಣಕ್ಕೆ ಅಡ್ಡಿಯಾಗಿದ್ದು, ಜನರ ನಂಬಿಕೆಯನ್ನೇ ನೆಪವಾಗಿಸಿಕೊಂಡ ಸರ್ಕಾರ ಕಟ್ಟಡದ ಅಭಿವೃದ್ಧಿ ಮಾಡದೇ ಕುಳಿತಿದೆಯೇ ಎಂಬ ಪ್ರಶ್ನೆಗಳು ಹುಟ್ಟಿಕೊಂಡಿವೆ.

ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಅಕ್ಕಿರಾಂಪುರ ಗ್ರಾಮದಲ್ಲಿ ಬಾಲಕಿಯರ ವಸತಿ ನಿಲಯ ಅಭಿವೃದ್ಧಿ ಕಾಣದೆ ಪಾಳು ಬಿದ್ದಿದೆ. ಗ್ರಾಮದಲ್ಲಿ ಇರುವ ಪಾರಂಪರಿಕ ನಂಬಿಕೆಯನ್ನು ನೆಪ ಮಾಡಿಕೊಂಡು ಸರ್ಕಾರ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳದೇ ನಿರ್ಲಕ್ಷ್ಯ ತೋರಿಸುತ್ತಿದೆಯೇ ಎಂಬ ಪ್ರಶ್ನೆ ತೀವ್ರ ಚರ್ಚೆಗೆ ಕಾರಣವಾಗಿದೆ. ಸುಮಾರು 69 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾದ ಕಸ್ತೂರಿಬಾ ಬಾಲಿಕಿಯರ ವಿದ್ಯಾರ್ಥಿನಿಲಯ ಕಳೆದ ಎಂಟು ವರ್ಷಗಳಿಂದ ಖಾಲಿ ಬಿದ್ದಿದ್ದು, ಇದು ಇದೀಗ ವಿವಾದಕ್ಕೆ ಕಾರಣವಾಗಿದೆ.

**ನಿರ್ಮಾಣವಾದ ಒಂದು ತಿಂಗಳಲ್ಲೇ ಖಾಲಿಯಾದ ಕಟ್ಟಡ**



2015ರಲ್ಲಿ ಜಿಲ್ಲಾ ಪಂಚಾಯಿತಿ ಹಾಗೂ ಶಿಕ್ಷಣ ಇಲಾಖೆಯಿಂದ ಗ್ರಾಮೀಣ ಭಾಗದ ವಿದ್ಯಾರ್ಥಿನಿಯರ ಶಿಕ್ಷಣಕ್ಕೆ ಅನುಕೂಲವಾಗಲೆಂದು ಈ ಬಾಲಕೀಯರ ನಿಲಯ ನಿರ್ಮಿಸಲಾಗಿತ್ತು. ಆದರೆ ನಿರ್ಮಾಣವಾದ ಕೇವಲ ಒಂದು ತಿಂಗಳಲ್ಲೇ ವಿದ್ಯಾರ್ಥಿನಿಯರ ಕೊರತೆಯಿಂದ ನಿಲಯವನ್ನು ಬಂದ್ ಮಾಡಲಾಗಿದೆ. ಅದಾದ ಬಳಿಕ ಇಂದಿಗೂ ಈ ವಿದ್ಯಾರ್ಥಿನಿಲಯ ಬಳಸಲಾಗದೇ ಖಾಲಿಯಾಗಿಯೇ ಉಳಿದಿದೆ.

**ಗ್ರಾಮಸ್ಥರ ಪಾರಂಪರಿಕ ನಂಬಿಕೆ**

ವಿದ್ಯಾರ್ಥಿನಿಲಯದ ಸಮೀಪದಲ್ಲಿರುವ ಏಳುಮಂದೆಮ್ಮ ದೇವಾಲಯದ ಕಾರಣದಿಂದಾಗಿ ಈ ಪ್ರದೇಶದಲ್ಲಿ ಮಹಿಳೆಯರು ಸಂಚರಿಸುವುದು ಅಪವಿತ್ರ ಎಂದು ಗ್ರಾಮಸ್ಥರು ನಂಬುತ್ತಾರೆ. ಮುಟ್ಟಾದ ಮಹಿಳೆಯರು ಅಥವಾ ಬಾಣಂತಿಯರು ಈ ಜಾಗದಲ್ಲಿ ಸಂಚರಿಸಿದರೆ ದೇವಿ ಮುನಿಸಿಕೊಳ್ಳುತ್ತಾಳೆ ಎಂಬ ಭಯ ಗ್ರಾಮಸ್ಥರಲ್ಲಿ ಇದೆ. ಈ ಕಾರಣದಿಂದ ಪೋಷಕರು ತಮ್ಮ ಹೆಣ್ಣುಮಕ್ಕಳನ್ನು ಈ ವಿದ್ಯಾರ್ಥಿನಿಲಯಕ್ಕೆ ಕಳುಹಿಸಲು ಹಿಂದೇಟು ಹಾಕುತ್ತಿದ್ದಾರೆ ಎಂದು ಕೆಲ ಗ್ರಾಮಸ್ಥರು ಹೇಳಿದ್ದಾರೆ.

**ಸರ್ಕಾರ ಕುಂಟು ನೆಪ ಹೇಳುತ್ತಿದೆ ಎನ್ನುತ್ತಿರುವ ಗ್ರಾಮಸ್ಥರು**

ಆದರೆ ಗ್ರಾಮದ ಕೆಲವರು ಈ ಮೌಢ್ಯವನ್ನು ನೆಪ ಮಾಡಿಕೊಂಡು ಸರ್ಕಾರ ಹಾಗೂ ಶಿಕ್ಷಣ ಇಲಾಖೆ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳದೆ ನಿರ್ಲಕ್ಷ್ಯ ತೋರಿಸುತ್ತಿವೆ ಎಂದು ಆರೋಪಿಸುತ್ತಿದ್ದಾರೆ. ವಿದ್ಯಾರ್ಥಿನಿಲಯವನ್ನು ಸರಿಯಾಗಿ ನಿರ್ವಹಿಸದೇ, ಭದ್ರತೆ ಹಾಗೂ ಸಿಬ್ಬಂದಿ ವ್ಯವಸ್ಥೆ ಮಾಡದೇ ಕಾಂಟ್ರಾಕ್ಟ್ ಮೂಲಕ ಖಾಸಗಿಯವರಿಗೆ ನೀಡಿದ್ದರಿಂದಲೇ ಈ ಸ್ಥಿತಿ ಉಂಟಾಗಿದೆ ಎಂದು ಕೆಲ ಗ್ರಾಮಸ್ಥರು ದೂರಿದ್ದಾರೆ.ಇದರ ನಡುವೆ ದೇವಸ್ಥಾನದ ಅರ್ಚಕರು ಈ ವಿವಾದಕ್ಕೆ ಸ್ಪಷ್ಟನೆ ನೀಡಿದ್ದಾರೆ. ವಿದ್ಯಾರ್ಥಿನಿಲಯವು ದೇವಾಲಯದ ಗಡಿಯ ಹೊರಗಿದ್ದು ದೇವಸ್ಥಾನಕ್ಕೂ ಹಾಸ್ಟೆಲ್‌ಗೂ ಯಾವುದೇ ಸಂಬಂಧವಿಲ್ಲ ಎಂದು ಹೇಳಿದ್ದಾರೆ. ಒಟ್ಟಿನಲ್ಲಿ ಮೌಢ್ಯ ನಂಬಿಕೆ, ಆಡಳಿತಾತ್ಮಕ ನಿರ್ಲಕ್ಷ್ಯ ಮತ್ತು ಅಭಿವೃದ್ಧಿಯ ಕೊರತೆ ನಡುವೆ 8 ವರ್ಷಗಳಿಂದ ಬಾಲಕೀಯರ ನಿಲಯ ಖಾಲಿ ಬಿದ್ದಿರುವುದು ಶಿಕ್ಷಣ ಇಲಾಖೆಗೆ ತಲೆನೋವಾಗಿಯೇ ಪರಿಣಮಿಸಿದೆ.

# ಹೈಟೆಕ್ ಕಳ್ಳರ ಕೈ ಚಳಕ..

## ಕೊರಟಗೆರೆ ತಾ.ನಲ್ಲಿ ಎರಡನೇ ಕಳ್ಳತನ



ಕೊರಟಗೆರೆ: ತಾಲೂಕಿನ ಕಸಬಾ ಹೋಬಳಿ ಹಂಚಿಹಳ್ಳಿ ಗ್ರಾಮ ಹೊರ ಹೊಲಯದಲ್ಲಿನ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಕಳ್ಳತನವಾಗಿದ್ದು, ವಾರದಲ್ಲೇ ಎರಡನೇ ಮಜುರಾಯಿ ಇಲಾಖೆ ದೇವಾಲಯದಲ್ಲಿ ಕಳ್ಳತನವಾಗಿರುವುದು ಕಂಡುಬಂದಿದೆ.



ಇತ್ತೀಚಿಗೆ ಕಳೆದ ಕೆಲವು ದಿನಗಳ ಹಿಂದೆಯಷ್ಟೇ ವಡ್ಡಗೆರೆ ವೀರನಾಗಮ್ಮ ದೇವಲಾಯದಲ್ಲಿ ಹೈಟೆಕ್ ಕಳ್ಳರು ಗ್ಯಾಸ್ ಕಟರ್ ಬಳಸಿ ದೇವಾಲಯ ಬಾಗಿಲು ಹೊಡೆದು ದೇವಿಯ ಮೇಲಿನಒಂದು ಕೋಟಿಗೂ ಅಧಿಕ ಬೆಲೆ ಬಾಳುವ ಬೆಳ್ಳಿ ಮತ್ತು 5 ಗ್ರಾಂ ಬಂಗಾರ ಕದ್ದು ಹೋಯ್ದಿರುವುದು ಕಂಡು ಬಂದಿತ್ತು, ಈಗ ಎರಡನೇ ಮುಜುರಾಯಿ ಇಲಾಖೆ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಬಾಗಿಲು ಹೊಡೆದು 50 ಸಾವಿರಕ್ಕೂ ಅಧಿಕ ನಗದು ಹಣ ದೋಚಿ ಪರಾರಿಯಾಗಿದ್ದಾರೆ ಎಂದು ಮಾಧ್ಯಮಕ್ಕೆ ಅರ್ಚಕರು ಮಾಹಿತಿ ಹಂಚಿಕೊಂಡಿದ್ದಾರೆ.

ಆಂಜನೇಯ ಸ್ವಾಮಿ ದೇವಾಲಯದಲ್ಲಿ ಈ ಹಿಂದೆ ದೇವಾಲಯದ ಗಂಟೆಗಳು ಸೇರಿದಂತೆ ಇತರೆ ವಸ್ತುಗಳು ಕಳುವು ಆಗಿತ್ತು, ಆ ಸಂದರ್ಭದಲ್ಲಿ ಪೋಲಿಸ್ ಇಲಾಖೆಗೆ ದೂರು ಸಹ ನೀಡಿದ್ದೇವು, ತಡ ರಾತ್ರಿ ಪುನಃ ದೇವಾಲಯದ ಹುಂಡಿ ಹೊಡೆದು ನಗದು ಹಣವನ್ನು ದೋಚಿಕೊಂಡು ಹೋಗಿದ್ದಾರೆ, ರಾತ್ರಿ ವೇಳೆ ಈ ರಸ್ತೆಯಲ್ಲಿ ಜನರು ಸಂಚರಿಸುವುದು ಕಡಿಮೆ ಎಂಬ ದೃಷ್ಟಿಯಿಂದ ಕಳ್ಳತನ ನಡೆದಿದೆ ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ಸಿದ್ದಲಿಂಗೇಶ್ವರ ಅನಾಥಾಲಯ ದಾಖಲಾತಿಗೆ ಅರ್ಜಿ ಆಹ್ವಾನ

ಶ್ರೀಸಿದ್ದಲಿಂಗೇಶ್ವರ ಅನಾಥಾಲಯ, ಶ್ರೀ ಸಿದ್ಧಗಂಗಾಮಠ, ತುಮಕೂರು ಜಿಲ್ಲೆ ಇದರ 2026–27ನೇ ಸಾಲಿಗೆ ಅರ್ಜಿಗಳನ್ನು ದಿನಾಂಕ 02–05–2026 ರಿಂದ ದಿನಾಂಕ 15–05–2026ರ ವರೆಗೆ ಕೊಡಲಾಗುವುದು. ಶ್ರೀ ಸಿದ್ದಲಿಂಗೇಶ್ವರ ಅನಾಥಾಲಯಕ್ಕೆ ಹೊಸದಾಗಿ 3ನೇ ತರಗತಿಯಿಂದ 8ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಬಯಸುವ ಗ್ರಾಮೀಣ ಮತ್ತು ನಗರ ಪ್ರದೇಶದ ಬಡ ಕುಟುಂಬದ ವಿದ್ಯಾರ್ಥಿಗಳು ಖುದ್ದಾಗಿ ಬಂದು ಶ್ರೀ ಮಠದ ಲೆಕ್ಕಪತ್ರ ವಿಭಾಗದಲ್ಲಿ ಅರ್ಜಿಯನ್ನು ಪಡೆಯುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಆದ್ಯತೆಯನ್ನು ನೀಡಲಾಗುವುದು, 09ನೇ ತರಗತಿ ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ದಾಖಲಾತಿ ಇರುವುದಿಲ್ಲ ಸರಿಯಾಗಿ ಭರ್ತಿ ಮಾಡಿದ ಪ್ರವೇಶ ಅರ್ಜಿಯ ಜೊತೆಗೆ ಆಯಾ ತಾಲ್ಲೂಕಿನ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ಧೃಡೀಕರಿಸಲ್ಪಟ್ಟ ವಾರ್ಷಿಕ ವರಮಾನದ ಆದಾಯ ಪತ್ರ ಮತ್ತು ಜಾತಿ ಧೃಡೀಕರಣ ಪತ್ರವನ್ನು ಸಲ್ಲಿಸುವುದು. ಪ್ರವೇಶವನ್ನು ಅಪೇಕ್ಷಿಸುವ ವಿದ್ಯಾರ್ಥಿಗಳಿಗೆ ಸಂದರ್ಶನದ ದಿನಾಂಕ 29.05.2026 ರಿಂದ ಪ್ರಾರಂಭವಾಗಿ ದಿನಾಂಕ 05–06–2026ರ ವರೆಗೆ ನಡೆಯುವುದು. ಈ ದಿನಾಂಕಗಳಲ್ಲಿ ವಿದ್ಯಾರ್ಥಿ ಮತ್ತು ಪೋಷಕರು ಖುದ್ದಾಗಿ ಬಂದು ಅಧ್ಯಕ್ಷರ ಸಂದರ್ಶನದಲ್ಲಿ ಪಾಲ್ಗೊಂಡು ನೇರವಾಗಿ ದಾಖಲಾತಿಯನ್ನು ಪಡೆಯುವುದು. ಇದಕ್ಕೆ ಪ್ರತ್ಯೇಕವಾದ ಸಂದರ್ಶನದ ಪತ್ರಗಳನ್ನು ಕಳುಹಿಸಿಕೊಡಲಾಗುವುದಿಲ್ಲ. ಪ್ರವೇಶದ ಅರ್ಜಿಗಳನ್ನು (Online) ನಲ್ಲಿ ಪಡೆಯಲು ಅವಕಾಶವಿರುವುದಿಲ್ಲ ಎಂದು ಶ್ರೀ ಮಠದ ಪೀಠಾಧಿಪತಿಗಳು ಪ್ರತಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




# ತಂತ್ರಜ್ಞರಿಂದ ರಕ್ತ ಪರೀಕ್ಷಾ ತಂತ್ರಜ್ಞರ ದಿನಾಚರಣೆ

## ಮಾ.29ರಂದು ಲ್ಯಾಬ್ ಟೆಕ್ನಾಲಜಿಸ್ಟ್ ರಾಷ್ಟ್ರೀಯ ಸಮಾವೇಶ

ಮೌನ ಕ್ರಾಂತಿ ನ್ಯೂಸ್

ತುಮಕೂರು: ಜಿಲ್ಲಾ ರಕ್ತ ಪರೀಕ್ಷಾ ತಂತ್ರಜ್ಞರ ಸಂಘದಿಂದ ಶನಿವಾರ ನಗರದಲ್ಲಿ ಅಂತರಾಷ್ಟ್ರೀಯ ರಕ್ತ ಪರೀಕ್ಷಾ ತಂತ್ರಜ್ಞರ ದಿನ ಆಚರಿಸಲಾಯಿತು. ಸಂಘದ ಪದಾಧಿಕಾರಿಗಳು ಹಾಗೂ ವಿವಿಧ ರಕ್ತ ಪರೀಕ್ಷಾ ತಂತ್ರಜ್ಞರು ಕೇಕ್ ಕತ್ತರಿಸಿ ಸಂಭ್ರಮದಿಂದ ಆಚರಣೆ ಮಾಡಿದರು.

ಸಂಘದ ಅಧ್ಯಕ್ಷ ಬೆಳ್ಳಿ ಲೋಕೇಶ್ ಈ ವೇಳೆ ಮಾತನಾಡಿ, ರೋಗಿಗಳ ಜೊತೆ ರಕ್ತ ಪರೀಕ್ಷಾ ತಂತ್ರಜ್ಞರ ನೇರ ಸಂಬಂಧ, ಸಂಪರ್ಕ ಇಲ್ಲದಿದ್ದರೂ, ನಾವು ರಕ್ತ ಪರೀಕ್ಷಿಸಿ ನೀಡುವ ವರದಿ ಆಧಾರದಲ್ಲಿ ವೈದ್ಯರು ರೋಗಿಗೆ ಚಿಕಿತ್ಸೆ ನೀಡುತ್ತಾರೆ. ಆರೋಗ್ಯ ಸೇವೆಯಲ್ಲಿ ನಮ್ಮ ಪಾತ್ರವೂ ಪ್ರಮುಖ ಎಂದರು.

ರಾಜ್ಯ ಮೆಡಿಕಲ್ ಲ್ಯಾಬ್ ಟೆಕ್ನಾಲಜಿಸ್ಟ್ ಅಸೋಸಿಯೇಷನ್‌ನಿಂದ ಈ ತಿಂಗಳ 29ರಂದು ಬೆಂಗಳೂರಿನ ಕಿಮ್ಸ್ ಆಸ್ಪತ್ರೆಯ ಕುವೆಂಪು ಕಲಾಕ್ಷೇತ್ರದಲ್ಲಿ 7ನೇ ರಾಷ್ಟ್ರೀಯ ಮೆಡಿಕಲ್ ಲ್ಯಾಬ್ ಟೆಕ್ನಾಲಜಿಸ್ಟ್ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಇದರ ಹಿನ್ನೆಲೆಯಲ್ಲಿ ರಾಜ್ಯ ಸಮಿತಿ ಪದಾಧಿಕಾರಿಗಳು ಇಂದು ನಗರದಲ್ಲಿ ಸಭೆ ನಡೆಸಿ ಚರ್ಚಿಸಿ, ಸಮಾವೇಶದಲ್ಲಿ ಭಾಗವಹಿಸಲು ಕೋರಿದ್ದಾರೆ ಹಾಗೂ ಅಂತರಾಷ್ಟ್ರೀಯ ರಕ್ತ ಪರೀಕ್ಷಾ ತಂತ್ರಜ್ಞರ ದಿನಾಚರಣೆಯಲ್ಲಿ ಭಾಗವಹಿಸಿದ್ದರು ಎಂದರು.

ರಾಜ್ಯ ಮೆಡಿಕಲ್ ಲ್ಯಾಬ್ ಟೆಕ್ನಾಲಜಿಸ್ಟ್ ಅಸೋಸಿಯೇಷನ್ ಅಧ್ಯಕ್ಷ ವೆಂಕಟಸ್ವಾಮಿ ಮಾತನಾಡಿ, ಲ್ಯಾಬ್ ಟೆಕ್ನಾಲಜಿಸ್ಟ್ ಸಮಸ್ಯೆಗಳ ಬಗ್ಗೆ ಸಮಾವೇಶದಲ್ಲಿ ಚರ್ಚೆ ನಡೆಸಿ, ಸಮಸ್ಯೆ ಬಗೆಹರಿಸಲು ಆರೋಗ್ಯ ಸಚಿವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದರು.



ರಾಜ್ಯದಲ್ಲಿ 2517 ಲ್ಯಾಬ್ ಟೆಕ್ನಾಲಜಿಸ್ಟ್ ಹುದ್ದೆಗಳು ಖಾಲಿ ಇವೆ. ಆ ಹುದ್ದೆಗಳನ್ನು ಭರ್ತಿ ಮಾಡಬೇಕು, ಗುತ್ತಿಗೆ ಆಧಾರದಲ್ಲಿ ನೇಮಕವಾಗಿರುವವರನ್ನು ಕಾಯಂ ಮಾಡಬೇಕು, ಅವರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಸರ್ಕಾರಕ್ಕೆ ವಿನಂತಿ ಮಾಡುವುದಾಗಿ ಹೇಳಿದರು.

ರಾಜ್ಯ ಸಮಿತಿ ಜಂಟಿ ಕಾರ್ಯದರ್ಶಿ ಸತೀಶ್, ಜಿಲ್ಲಾ ಸಂಘದ ಗೌರವಾಧ್ಯಕ್ಷ ಅಂಬ್ಲಿ ನಾಗರಾಜು, ಉಪಾಧ್ಯಕ್ಷ ಸುರೇಶ್, ಖಜಾಂಚಿ ಮಹೇಶ್, ನಿರ್ದೇಶಕರಾದ ಲಾಸ್ಯ ನಾಗರಾಜು, ಸುಮ, ಕಲ್ಪನಾ, ಪ್ರತಾಪ್, ಗೌರಣ್ಣ, ದತ್ತಾತ್ರೀ, ಭಾಗ್ಯ, ಪ್ರೇಮ್, ಜಗದೀಶ್, ಸರ್ಕಾರಿ ರಕ್ತ ಪರೀಕ್ಷಾ ತಂತ್ರಜ್ಞರ ಸಂಘದ ಅಧ್ಯಕ್ಷ ಮೋಹನ್‌ಕುಮಾರ್, ಕಾರ್ಯದರ್ಶಿ ಮಂಜುನಾಥ್, ಜಂಟಿ ಕಾರ್ಯದರ್ಶಿ ಸತೀಶ್, ನಿರ್ದೇಶಕರಾದ ನರಸಿಂಹಮೂರ್ತಿ, ಪದ್ಮರಾಜು, ಧ್ರುವ, ಅರುಣ್ ಮೊದಲಾದವರು

# ಸಿಲಿಂಡರ್ ಸಂಗ್ರಹಣೆ, ಕಾಳಸಂತೆಯಲ್ಲಿ ಮಾರಾಟದ ವಿರುದ್ಧ ಕಠಿಣ ಕ್ರಮ

ಮೌನ ಕ್ರಾಂತಿ ನ್ಯೂಸ್

ತುಮಕೂರು: ಎಲ್‌ಪಿಜಿ ಸಿಲಿಂಡರ್‌ಗಳ ಸಂಗ್ರಹಣೆ ಮತ್ತು ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಪೊಲೀಸರಿಗೆ ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ ಅವರು ಶನಿವಾರ ಹೇಳಿದ್ದಾರೆ.



ಪಶ್ಚಿಮ ಏಷ್ಯಾ ಸಂಘರ್ಷದಿಂದ ಅನಿಲ ಪೂರೈಕೆಯಲ್ಲಿ ಭಾರೀ ವ್ಯತ್ಯಯ ಉಂಟಾಗಿದ್ದು, ಜನ ಎಲ್ ಪಿಜಿ ಸಿಲಿಂಡರ್ ಗಳಿಗಾಗಿ ಪರದಾಡುತ್ತಿದ್ದಾರೆ.

"ಯಾರಾದರೂ ಅನಿಲ ಸಿಲಿಂಡರ್‌ಗಳನ್ನು ಸಂಗ್ರಹಿಸಲು ಅಥವಾ ಕಾಳಸಂತೆಯಲ್ಲಿ ಮಾರಾಟ ಮಾಡಲು ಪ್ರಯತ್ನಿಸಿದರೆ, ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ರಾಜ್ಯಾದ್ಯಂತ ಪೊಲೀಸರಿಗೆ ಈ ನಿಟ್ಟಿನಲ್ಲಿ ಸೂಚನೆ ನೀಡಲಾಗಿದೆ... ನಾವು ಅದಕ್ಕೆ ಅವಕಾಶ ನೀಡುವುದಿಲ್ಲ" ಎಂದು ಪರಮೇಶ್ವರ ವರದಿಗಾರರಿಗೆ ತಿಳಿಸಿದ್ದಾರೆ.

ಅಧಿಕಾರಿಗಳ ಹೇಳಿಕೆಯನ್ನು ಉಲ್ಲೇಖಿಸಿ, ಮನೆಗಳಿಗೆ ಅಡಿಗೆ ಅನಿಲ ಸಿಲಿಂಡರ್‌ಗಳ ಪೂರೈಕೆಯಲ್ಲಿ ಪ್ರಸ್ತುತ ಯಾವುದೇ ಸಮಸ್ಯೆಗಳಿಲ್ಲ ಎಂದು ಅವರು ಹೇಳಿದರು.

ಆದಾಗ್ಯೂ, ವಾಣಿಜ್ಯ ಅನಿಲ ಸಿಲಿಂಡರ್‌ಗಳಿಗೆ ಸಂಬಂಧಿಸಿದಂತೆ ಪೂರೈಕೆ ಸಮಸ್ಯೆಗಳಿವೆ ಎಂದು ಗೃಹ ಸಚಿವರು ತಿಳಿಸಿದ್ದಾರೆ.

"ಹೋಟೆಲ್‌ಗಳು ಒಂದೆರಡು ದಿನಗಳವರೆಗೆ ಸಮಸ್ಯೆಗಳನ್ನು ಎದುರಿಸಬಹುದು, ಸಮಸ್ಯೆಯನ್ನು ಪರಿಹರಿಸುವ ಪ್ರಯತ್ನಗಳು ನಡೆಯುತ್ತಿವೆ" ಎಂದು ಅವರು ತಿಳಿಸಿದರು.

ಇರಾನ್ ಭಾರತಕ್ಕೆ ಕೆಲವು ವಿನಾಯಿತಿಗಳನ್ನು ನೀಡಿದ ನಂತರ, ಹಾರ್ಮುಜ್ ಜಲಸಂಧಿಯ ಮೂಲಕ ಎರಡು ಭಾರತೀಯ ಹಡಗುಗಳು ಮುಂಬೈ ತಲುಪಿವೆ ಎಂಬ ವರದಿಗಳಿಗೆ ಪ್ರತಿಕ್ರಿಯಿಸಿದ ಪರಮೇಶ್ವರ ಅವರು, ಗಲ್ಫ್ ದೇಶಗಳಿಂದ ಅನಿಲ ಮತ್ತು ತೈಲ ಪೂರೈಕೆ ಶೀಘ್ರದಲ್ಲೇ ಸುಧಾರಿಸುತ್ತದೆ ಎಂಬ ಭರವಸೆಯನ್ನು ವ್ಯಕ್ತಪಡಿಸಿದರು.

ಇದೇ ವೇಳೆ ಒಳ ಮೀಸಲಾತಿ ಕುರಿತ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ನೇಮಕಾತಿಯಲ್ಲಿ ಒಳ ಮೀಸಲಾತಿ ಕುರಿತು ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾರ್ಚ್ 27 ರಂದು ವಿಶೇಷ ಸಂಪುಟ ಸಭೆ ಕರೆದಿದ್ದಾರೆ ಎಂದು

# ರಾಜ್ಯ ಸಭಾ ಚುನಾವಣೆ ಹಿನ್ನೆಲೆಯಲ್ಲಿ ನಮ್ಮ ಶಾಸಕರಿಗೆ ದೊಡ್ಡ ಆಫರ್ ಬಂದಿವೆ; ಎಲ್ಲರನ್ನೂ ಕಾಪಾಡಬೇಕಿರುವುದು ನಮ್ಮ ಕರ್ತವ್ಯವಲ್ಲವೇ?

ಮೌನ ಕ್ರಾಂತಿ ನ್ಯೂಸ್



ಬೆಂಗಳೂರು: ಬಿಜೆಪಿಯವರು ಆಪರೇಷನ್ ಕಮಲದ ಪಿತಾಮಹರು, ಕುದುರೆ ವ್ಯಾಪಾರಕ್ಕೆ ಹೆಸರುವಾಸಿ. ನಾವು ಅದಕ್ಕೆ ಅವಕಾಶ ನೀಡುವುದಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹರಿಹಾಯ್ದರು.

ವಿಧಾನಸೌಧದ ಆವರಣದಲ್ಲಿ ಹಾಗೂ ಬಿಡದಿಯ ರೆಸಾರ್ಟ್ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯೆ ನೀಡಿದರು. ರಾಜಕೀಯ ಪಕ್ಷಗಳಿಗೆ ಕುದುರೆ ವ್ಯಾಪಾರದ ಭೀತಿ ಇರುತ್ತದೆ. ರಾಜಕೀಯ ರಂಗದಲ್ಲಿ ಎಲ್ಲಾ ಪಕ್ಷಗಳು ಎದುರಿಸುವ ವಿಚಾರ ಇದು. ಅವರು ಇಲ್ಲಿಗೆ ಬಂದಿರುವಾಗ ಅವರಿಗೆ ನೆರವು ನೀಡುವುದು ನಮ್ಮ ಕರ್ತವ್ಯ. ನಾನು ಹಾಗೂ ನಮ್ಮ ಶಾಸಕರು ಅವರನ್ನು ಭೇಟಿ ಮಾಡಿದ್ದೇವೆ ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷಕ್ಕೆ ಅವರದೇ ಶಾಸಕರ ಮೇಲೆ ನಂಬಿಕೆ ಇಲ್ಲ ಎಂಬ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಹಾಗಿದ್ದರೆ ಅವರು ಕರ್ನಾಟಕದಲ್ಲಿ ಆಪರೇಷನ್ ಕಮಲ ಮಾಡಿದ್ದು ಯಾಕೆ? ಎಂದು ಪ್ರಶ್ನಿಸಿದರು.

ಇದು ಹೈಕಮಾಂಡ್ ನಾಯಕರು ಕೊಟ್ಟಿರುವ ಟಾಸ್ಕ್ ಆಗಿದೆಯೇ ಎಂದು ಕೇಳಿದಾಗ, "ಯಾವ ಟಾಸ್ಕ್ ಕೂಡ ಇಲ್ಲ. ರಾಜ್ಯಸಭಾ ಚುನಾವಣೆ ಇರುವ ಕಾರಣಕ್ಕೆ ಆಪರೇಷನ್ ಕಮಲದ ಭೀತಿ ಎದುರಾಗಿದೆ. ನಮ್ಮವರ ಮೇಲೆ ಒತ್ತಡವಿದೆ. ದೊಡ್ಡ, ದೊಡ್ಡ ಆಫರ್ ಗಳನ್ನು ಕೊಡುತ್ತಿದ್ದಾರೆ. 14-15 ಜನ ಎಂಎಲ್ ಎಗಳು ಇಲ್ಲಿಗೆ ಬಂದಿದ್ದಾರೆ. ಒಡಿಸ್ಸಾ ಪಿಸಿಸಿ ಅಧ್ಯಕ್ಷರು ಕರೆ ಮಾಡಿ ಜಾತ್ಯಾತೀತ ಪಕ್ಷಗಳೆಲ್ಲಾ ಒಂದಾಗಿದ್ದೇವೆ. ಆಪರೇಷನ್ ಕಮಲ ನಡೆಯುವ ಸಂಭವಿದೆ ಎಂದರು. ಪಕ್ಷದ ಅಧ್ಯಕ್ಷರು ಕರೆ ಮಾಡಿದಾಗ ಗೌರವ ನೀಡುವುದು ನಮ್ಮ ಕರ್ತವ್ಯ. ಬನ್ನಿ ಇಲ್ಲೇ ವಾತಾವರಣ ಚೆನ್ನಾಗಿದೆ ಎಂದು ಹೇಳಿದೆ. ಎಲ್ಲಾ ಶಾಸಕರು ಖುಷಿಯಾಗಿದ್ದಾರೆ. ಹೊಸಬರು ಸಹ ಇದ್ದಾರೆ. ಅವರೇ ಬಂದು ಇಲ್ಲಿ ಉಳಿದುಕೊಂಡಿದ್ದಾರೆ. ನಾವು ಅವರ ಯೋಗಕ್ಷೇಮ ವಿಚಾರಿಸುತ್ತಿದ್ದೇವೆ. ಬಿಜೆಡಿ, ಕಮ್ಯುನಿಸ್ಟ್ ಪಕ್ಷ ಹಾಗೂ ನಾವು ಜಂಟಿಯಾಗಿ ಅಭ್ಯರ್ಥಿ ಕಣಕ್ಕೆ ಇಳಿಸಿದ್ದೇವೆ. ಬಿಜೆಪಿ ಮಾಡುವುದು ಮಾಡುತ್ತದೆ, ನಾವು ಮಾಡೋದು ಮಾಡುತ್ತೇವೆ" ಎಂದರು.

ಟ್ರಬಲ್ ಶೂಟರ್ ಕೆಲಸ ಸಮಾಪ್ತಿಯಾಗಿದೆ ಎಂದಾಗ, "ಮಾಗಡಿ ಬಾಲಕೃಷ್ಣ, ಯೋಗೇಶ್ವರ್ ಇದ್ದಾರೆ. ಅವರ ಅನುಭವ, ಅವರ ಕಸ್ಟಡಿಯಲ್ಲಿ ನಾವಿದ್ದೇವೆ. ಅವರಿಗೂ ಜವಾಬ್ದಾರಿ ಇದೆಯಲ್ಲ. ನಮ್ಮ ಜಿಲ್ಲೆಯ ಎಲ್ಲಾ ಶಾಸಕರಿಗೂ ಜವಾಬ್ದಾರಿಯಿದೆ. ಎಲ್ಲರನ್ನೂ ಕಾಪಾಡಬೇಕಿರುವುದು ನಮ್ಮ ಕರ್ತವ್ಯವಲ್ಲವೇ? ಯಾರೂ ಬರಲ್ಲ ಅದು ಬೇರೆ ವಿಚಾರ. ಯಾರೂ ಬರಲು ಆಗುವುದಿಲ್ಲ, ಮುಟ್ಟಲೂ ಆಗುವುದಿಲ್ಲ, ಮಾತನಾಡುವುದಕ್ಕೂ ಆಗುವುದಿಲ್ಲ. ಅದಕ್ಕೆ ಅವಕಾಶವೂ ಇಲ್ಲ" ಎಂದರು.

ಈ ಹಿಂದೆಯೂ ಗುಜರಾತ್ ಚುನಾವಣೆ ಹೊತ್ತಿನಲ್ಲೂ ನೀವು ಇದೇ ರೀತಿ ಪಕ್ಷಕ್ಕೆ ನೆರವಾಗಿದ್ದೀರಿ. ನಿಮ್ಮ ಆಸೆ ಈಡೇರಲಿದೆಯೇ ಎಂದಾಗ, "ನಾನು ಇದರ ಬಗ್ಗೆ ಮಾತನಾಡುವುದಿಲ್ಲ. ಕಾದು ನೋಡೋಣ" ಎಂದರು. ಇದರಿಂದ ನಿಮ್ಮ ಮುಂದಿನ ಹೆಜ್ಜೆ ನಿಮ್ಮ ಕನಸಿನ ಹತ್ತಿರ ಇರುತ್ತದೆಯೇ ಎಂದಾಗ, "ನಾನೇಕೆ ಕನಸು ಕಾಣಲಿ. ಎಲ್ಲಿ ಶ್ರಮ ಇದೆಯೋ ಅಲ್ಲಿ ಫಲವಿದೆ" ಎಂದರು. ಯಾವಾಗ ವಾಪಸ್ ಕರೆದುಕೊಂಡು ಹೋಗುವುದು ಎಂದಾಹ, "ಅದನ್ನ ನಾವು ತೀರ್ಮಾನ ಮಾಡುತ್ತೇವೆ" ಎಂದರು.

ಮೌನ ಕ್ರಾಂತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9449499938

# ರಂಜಾನ್ ಹಾಗೂ ಯುಗಾದಿ ಹಬ್ಬಗಳ ಪ್ರಯುಕ್ತ ಶಾಂತಿ ಸಭೆ



ಮಧುಗಿರಿ: ಹಬ್ಬಗಳ ಸಂಧರ್ಭದಲ್ಲಿ ಕೆಲವರು ದ್ವಿಚಕ್ರ ವಾಹನಗಳನ್ನು ಬಳಸಿಕೊಂಡು ಹೆಚ್ಚು ವಿಲೀಂಗ್ ಮಾಡುತ್ತಿರುವುದು ಸರಿಯಲ್ಲ ಎಂದು ಸಿಪಿಐ ಹನುಮಂತರಾಯಪ್ಪ ತಿಳಿಸಿದರು.

ಪಟ್ಟಣದ ಪೊಲೀಸ್ ಠಾಣೆಯ ಆವರಣದಲ್ಲಿ ರಂಜಾನ್ ಹಾಗೂ ಯುಗಾದಿ ಹಬ್ಬಗಳ ಪ್ರಯುಕ್ತ ಆಯೋಜಿಸಲಾಗಿದ್ದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು,

ಪ್ರತಿ ವರ್ಷವು ಹಬ್ಬಗಳು ಬರುತ್ತಿದ್ದು ಇಂತಹ ಸಂಧರ್ಭದಲ್ಲಿ ಇಲಾಖೆಯು ನೀಡುವ ಕಾನೂನು ಕ್ರಮಗಳನ್ನು ಪಾಲಿಸಿದರೆ ಯಾರಿಗೂ ತೊಂದರೆ ಯಾಗುವುದಿಲ್ಲ.ಈಗಾಗಲೇ ವಿಲೀಂಗ್ ಮಾಡುತ್ತಿರುವವರ ವಿರುದ್ಧ ದೂರು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗಿದೆ.ಇಂತಹ ಚಟುವಟಿಕೆಗಳಲ್ಲಿ ತೊಡಗಿಕೊಳ್ಳದಂತೆ ಪೋಷಕರು ಎಚ್ಚರ ವಹಿಸಬೇಕು,ಎಚ್ಚರ ವಹಿಸದೆ ಹೋದರೆ ಮಕ್ಕಳ ಜತೆಯಲ್ಲಿ ಪೋಷಕರಿಗೂ ಅನಾನುಕೂಲ ಉಂಟಾಗುತ್ತದೆ.ಆಡುವಾಗಿಲ್ಲ.ರಂಜಾನ್ ಹಬ್ಬ ಮತ್ತು ಯುಗಾದಿ ಹಬ್ಬಗಳ ಆಚರಣೆಯ ಸಂಧರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರ ವಹಿಸಲಾಗುತ್ತಿದೆ ಎಂದರು

ಪಿ ಎಸ್ ಐ ಚಂದ್ರಶೇಖರ್ ಮಾತನಾಡಿ ಹಬ್ಬಗಳು ಶಾಂತಿ ಮತ್ತು ಸೌಹರ್ದತೆಯಿಂದ ಕೂಡಿದ್ದು ತಾಲೂಕಿನಲ್ಲಿ ಹಿಂದೂ ಮತ್ತು ಮುಸ್ಲಿಂ ಭಾಂಧವರು ಮೊದಲಿನಿಂದಲೂ ಭಾವೈಕ್ಯತೆಯಿಂದ ಆಚರಿಸುತ್ತಿದ್ದಾರೆ,ತಾಲೂಕು ಶಾಂತಿಗೆ ಹೆಸರುವಾಸಿಯಾಗಿದೆ ಯುಗಾದಿ ಸಂಧರ್ಭದಲ್ಲಿ ಎಲ್ಲೆಂದರಲ್ಲಿ ಹಾಗೂ ಪಾಳು ಬಿದ್ದಮನೆ,ಲೇಔಟ್,ಮತ್ತಿತರರ ಸ್ಥಳಗಳಲ್ಲಿ ಯಾರಿಗೂ ತಿಳಿಯದ ಹಾಗೆ ಇಸ್ಪೀಟು ಆಟವನ್ನು ಕೆಲ ಆಡುತ್ತೇವೆ ನಮಗೆ ಅನುಮತಿ ನೀಡಿ ಎಂದು ಯಾರೂ ಸಹ ಠಾಣೆಯ ಬಳಿ ಬರಬೇಡಿ,ಯುಗಾದಿ ಹಬ್ಬದಲ್ಲಿ ಯಾವುದೇ ಕಾರಣಕ್ಕೂ ಇಸ್ಪಿಟ್ ಆಟ ಆಡುವಾಗಿಲ್ಲ.ಇಸ್ಪೀಟು ಆಟವು ಕಾನೂನು ಬಾಹಿರವಾಗಿದ್ದು ಅಂತಹ ಆಟಗಳಲ್ಲಿ ತೊಡಗಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು.ಅಂತಹವರು ಏನಾದರೂ ಪೊಲೀಸರಿಗೆ ದೊರೆತರೆ ಅವರುಗಳ ಬಗ್ಗೆ ಕೂಲಂಕುಷವಾಗಿ ಪರೀಶೀಲಿಸಿ ಯಾವುದಾದರೂ ಹಳೆಯ ಪ್ರಕರಣಗಳಿದ್ದರೆ ಅಂತಹವರನ್ನು ಯಾವುದೇ ಮುಲಾಜಿಲ್ಲದೆ ರೌಡಿ ಷೀಟರ್ ಗಳ ಪಟ್ಟಿಗೆ ಸೇರ್ಪಡೆ ಮಾಡಲಾಗುವುದು.ರಂಜಾನ್ ಮತ್ತು ಯುಗಾದಿ ಹಬ್ಬಗಳನ್ನು ತಮ್ಮ ತಮ್ಮ ಸಂಪ್ರದಾಯಗಳಂತೆ ಆಚರಿಸಿಕೊಳ್ಳಿ ಎಂದರು.

ಮುಖಂಡರುಗಳಾದ ಬಾಬ ಫಕೃದ್ದೀನ್,ಎಸ್ ಬಿ ಟಿ ರಾಮು,ನಾರಾಯಣ ರಾಜು,

ಕಿಶೋರ್ ಶೆಟ್ಟಿ ಅನಂದಕೃಷ್ಣ,ತಿಮ್ಮರಾಜು,ಕೇಶ ’ವಮೂರ್ತಿ,

ಷರೀಫ್,ಸಿಕಂದರ್,ಪೊಲೀಸ್ ಸಿಬ್ಬಂದಿ ಹಾಗೂ ಮತ್ತಿತರರು ಇದ್ದರು.

# ಶಿವ ವಿವಿಧೋದ್ದೇಶ ಸಹಕಾರ ಸಂಘದ ನೂತನ ಕಟ್ಟಡ ಉದ್ಘಾಟನೆ

ತಿಪಟೂರು: ಹಿಂದಿನ ಕಾಲದಲ್ಲಿ ಇನ್ನೊಬ್ಬರ ಋಣದಲ್ಲಿ ಸಾಯಬಾರದು ಎಂಬ ನೈತಿಕ ಮೌಲ್ಯಗಳನ್ನು ಜನರು ಕಟ್ಟುನಿಟ್ಟಾಗಿ ಪಾಲಿಸುತ್ತಿದ್ದರು ಇಂದಿನ ಕಾಲದಲ್ಲಿ ಧರ್ಮಪ್ರಜ್ಞೆಯನ್ನು ಮೀರಿಸುವ ರೀತಿಯಲ್ಲಿ ಸ್ವಾರ್ಥದ ಮನೋಭಾವ ಹೆಚ್ಚುತ್ತಿರುವುದು ವಿಷಾದಕರ ಸಂಗತಿ ಎಂದು ಸಿರಿಗೆರೆಯ ತರಳಬಾಳು ಜಗದ್ಗುರು ಬೃಹನ್ಮಠದ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ತಿಳಿಸಿದದರು.



ನಗರದ ಕೆ.ಆರ್.ಬಡಾವಣೆ, ಗೋವಿನಪುರ ವೃತ್ತದಲ್ಲಿ ನಿರ್ಮಿಸಲಾದ ಶಿವ ವಿವಿಧೋದ್ದೇಶ ಸಹಕಾರ ಸಂಘದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದರು.

ಕಲಿಯುಗದಲ್ಲಿ ಒಳ್ಳೆಯವರೂ ಇದ್ದಾರೆ, ಕೆಟ್ಟವರೂ ಇದ್ದಾರೆ. ಆದರೆ ಸ್ವಾರ್ಥಕ್ಕೆ ಒಳಗಾದ ಮನುಷ್ಯ ಯಾವುದಕ್ಕೂ ಹಿಂದೆ ಮುಂದೆ ನೋಡದೆ ನಡೆದುಕೊಳ್ಳುವ ಪರಿಸ್ಥಿತಿ ಸಮಾಜದಲ್ಲಿ ಕಂಡುಬರುತ್ತಿದೆ.

ಹಿಂದೆ ಆಸ್ತಿಗೆ ಒಬ್ಬ ಮಗ, ಆಸರೆಗೆ ಒಬ್ಬ ಮಗಳು ಎಂಬ ಮಾತು ಪ್ರಚಲಿತದಲ್ಲಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಕೆಲ ಹೆಣ್ಣುಮಕ್ಕಳು ತಂದೆಯ ಆಸ್ತಿಗಾಗಿ ನ್ಯಾಯಾಲಯದ ಮೊರೆ ಹೋಗುತ್ತಿರುವುದು ಸಂಬಂಧಗಳ ಮೌಲ್ಯಗಳನ್ನು ಕುಗ್ಗಿಸುವ ಕ್ರೌರ್ಯ ಹಾಗೂ ಅಮಾನವೀಯತೆಯಾಗಿದೆ ಇಂತಹ ಘಟನೆಗಳಿಂದ ಕುಟುಂಬ ಸಂಬಂಧಗಳಲ್ಲಿ ಬಿರುಕುಗಳು ಮೂಡಿ, ಬಂಧಗಳು ದೂರವಾಗುತ್ತಿರುವುದು ದುಃಖಕರ ಸಂಗತಿ. ತಂದೆ ತಾಯಿ ಮತ್ತು ಮಕ್ಕಳ ನಡುವಿನ ಸಂಬಂಧವು ಬಹಳ ಅಮೂಲ್ಯವಾದದ್ದು. ಅಂತಹ ಸಂದರ್ಭಗಳಲ್ಲಿ ನ್ಯಾಯಾಲಯದ ಮೊರೆ ಹೋಗುವುದಕ್ಕಿಂತ ಪರಸ್ಪರ ಕುಳಿತು ಮಾತನಾಡಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವುದು ಉತ್ತಮ ಎಂದು ಹೇಳಿದರು.

ಮನುಷ್ಯ ಜೀವನದಲ್ಲಿ ಮಾನವೀಯ ಸಂಬಂಧಗಳು ಅತ್ಯಂತ ಮುಖ್ಯವಾಗಿದ್ದು, ಮನುಷ್ಯ ಮನುಷ್ಯರ ನಡುವಿನ ಬಂಧಗಳು ಉಳಿದಾಗ ಮಾತ್ರ ಜೀವನಕ್ಕೆ ನಿಜವಾದ ಅರ್ಥ ಸಿಗುತ್ತದೆ. ಸಮಾಜದಲ್ಲಿ ಸಂಬಂಧಗಳು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತವೆ. ಆದ್ದರಿಂದ ಪರಸ್ಪರ ಗೌರವ, ಸಹಾನುಭೂತಿ ಮತ್ತು ವಿಶ್ವಾಸದಿಂದ ಸಂಬಂಧಗಳಿಗೆ ಬೆಲೆ ನೀಡಬೇಕು.

ಕಾನೂನು ಮತ್ತು ಧರ್ಮವು ಪರಸ್ಪರ ಸಂಬಂಧ ಹೊಂದಿದ್ದು, ಧರ್ಮದ ಮೂಲ ತತ್ವಗಳೇ ಕಾನೂನಿನಲ್ಲಿ ಅಡಕವಾಗಿದ್ದು, ಸಮಾಜದಲ್ಲಿ ಶಿಸ್ತು ಮತ್ತು ನ್ಯಾಯ ಸ್ಥಾಪನೆಗೆ ಕಾನೂನು ಪ್ರಮುಖವಾದ ಪಾತ್ರ ವಹಿಸುತ್ತದೆ. ಕಾನೂನುಗಳನ್ನು ಉತ್ತಮ ಉದ್ದೇಶದಿಂದ ರೂಪಿಸಲಾಗಿದ್ದರೂ, ಅವುಗಳನ್ನು ತಪ್ಪಿಸುವ ಮಾರ್ಗಗಳನ್ನು ಹುಡುಕುವ ಮನೋಭಾವ ಕೆಲವರಲ್ಲಿ ಕಾಣಿಸುತ್ತಿರುವುದು ದುಃಖಕರ ಸಂಗತಿಯಾಗಿದೆ. ಕಾನೂನನ್ನು ಗೌರವಿಸಿ, ಅದರ ಪಾಲನೆ ಮಾಡುವ ಮನಸ್ಥಿತಿ ಸಮಾಜದಲ್ಲಿ ಬೆಳೆಯಬೇಕು. ಇನ್ನೂ ಕೆಲವರು ಕಾನೂನು ಪಂಡಿತರನ್ನೇ ಮೀರಿಸುವಂತಹ ಒಳಸುಳಿವುಗಳನ್ನು ಹುಡುಕುವ ಮೂಲಕ ಕಾನೂನನ್ನು ತಪ್ಪಿಸಲು ಯತ್ನಿಸುತ್ತಿರುವುದು ಸಮಾಜದಲ್ಲಿ ಅನೇಕ ಸಮಸ್ಯೆಗಳಿಗೆ ಕಾರಣವಾಗುತ್ತಿವೆ.

ಇದೇ ಸಂದರ್ಭದಲ್ಲಿ ಸಹಕಾರಿ ಬ್ಯಾಂಕುಗಳಿಂದ ಸಾಲ ಪಡೆದವರು ಅದನ್ನು ಸಮಯಕ್ಕೆ ಸರಿಯಾಗಿ ಮರುಪಾವತಿ ಮಾಡಿದರೆ ಮಾತ್ರ ಬ್ಯಾಂಕುಗಳು ಮತ್ತಷ್ಟು ಬಲವಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಆರ್.ಬಿ.ಆನಂದಮೂರ್ತಿ ಸಹಕಾರ ಸಂಘಗಳು ಸಮಾಜದ ಆರ್ಥಿಕ ಅಭಿವೃದ್ಧಿಗೆ ಪ್ರಮುಖ ಆಧಾರವಾಗಿವೆ. ಸಾಮಾನ್ಯ ಜನರು ಪರಸ್ಪರ ಸಹಕಾರದ ಮೂಲಕ ತಮ್ಮ ಆರ್ಥಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಹಕಾರ ಸಂಘಗಳು ಮಹತ್ವದ ಪಾತ್ರ ವಹಿಸುತ್ತವೆ. ಸದಸ್ಯರ ಉಳಿತಾಯವನ್ನು ಉತ್ತೇಜಿಸುವುದರ ಜೊತೆಗೆ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯಗಳನ್ನು ಒದಗಿಸುವ ಮೂಲಕ ಜನರ ಜೀವನಮಟ್ಟವನ್ನು ಸುಧಾರಿಸಲು ಸಹಕಾರ ಸಂಘಗಳು ಸಹಾಯಕವಾಗುತ್ತವೆ ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಸಾಧು ವೀರಶೈವ ಸಮಾಜದ ಅಧ್ಯಕ್ಷ ಪಿ.ಬಿ.ನಂಜುಡಪ್ಪ, ಶಿವ ವಿವಿಧೋದ್ದೇಶ ಸಹಕಾರ ಸಂಘದ ಉಪಾಧ್ಯಕ್ಷ ಜಗದೀಶ್, ನಿರ್ದೇಶಕರಾದ ಈಶ್ವರಪ್ಪ ಬೈರನಾಯಕನಹಳ್ಳಿ, ಗಿರೀಶ್ ಮತ್ತಿಹಳ್ಳಿ, ನವೀನ್ ಕುಮಾರ್ ಹಾಲ್ಕುರಿಕೆ, ಈಶ್ವರಪ್ಪ.ಎಮ್.ಸಿ ಮತ್ತಿಹಳ್ಳಿ, ಬಸವರಾಜು ಪಟ್ರೇಹಳ್ಳಿ, ಭವ್ಯ ಸೂರಗೊಂಡನಹಳ್ಳಿ, ಲೋಲಾಕ್ಷಮ್ಮ,ಓಂಕಾರಮೂರ್ತಿ ಕರೀಕೆರೆ, ಕಾರ್ಯದರ್ಶಿ ದಿವಾಕರ್, ಸಿಬ್ಬಂದಿಗಳಾದ ಟಿ.ಆರ್.ರಮೇಶ್, ಪುಟ್ಟೇಗೌಡ, ಮಾಜಿ ಅಧ್ಯಕ್ಷರಾದ ರಾಜಶೇಖರ್, ಸೋಮಶೇಖರ್, ರೇಣುಕಮ್ಮ, ಲಿಂಗರಾಜು, ದಿನೇಶ್, ನಾಗರಾಜು, ಗಂಗಾಧರ್, ನಗರಸಭಾ ಮಾಜಿ ಸದಸ್ಯ ಪ್ರಸನ್ನಕುಮಾರ್, ಯೋಗೀಶ್, ಮನೋಹರ್, ವಿಜಯ್, ಹರೀಶ್, ನಂಜುಡಪ್ಪ, ಬಸವರಾಜು, ಚಂದ್ರಶೇಖರ್ ಸೇರಿದಂತೆ ಸಮಾಜದ ಬಾಂಧವರು ಹಾಗೂ ಸಂಘದ ಷೇರುದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ನಗರದ ಕೆ.ಆರ್.ಬಡಾವಣೆಯಲ್ಲಿ ಸಹಕಾರ ಸಂಘದ ಕಟ್ಟಡ ಉದ್ಘಾಟನಾ ಸಮಾರಂಭ.

# 4,824 ಕೋಟಿ ಮೊತ್ತದ ಬಂಡವಾಳ ಹೂಡಿಕೆಗೆ ಸರ್ಕಾರ ಸಮ್ಮತಿ: ರಾಜ್ಯದಲ್ಲಿ 14,525 ಉದ್ಯೋಗ ಅವಕಾಶ ಸೃಷ್ಟಿ!

ವಿಜಯಪುರ, ಬಾಗಲಕೋಟೆ, ಚಿತ್ರದುರ್ಗ, ಕೋಲಾರ,



ಬೆಂಗಳೂರು: ವಿಜಯಪುರ, ಬಾಗಲಕೋಟೆ, ಚಿತ್ರದುರ್ಗ, ಕೋಲಾರ, ರಾಮನಗರ ಸೇರಿದಂತೆ 13 ಜಿಲ್ಲೆಗಳಾದ್ಯಂತ 37 ಹೊಸ ಕೈಗಾರಿಕೆಗಳು ಮತ್ತು ಹೆಚ್ಚುವರಿ ಹೂಡಿಕೆಯ 2 ಯೋಜನೆಗಳ ಒಟ್ಟು 4,824 ಕೋಟಿ ಮೊತ್ತದ ಬಂಡವಾಳ ಹೂಡಿಕೆಗೆ ಶುಕ್ರವಾರ ನಡೆದ 158ನೇ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ.

’ಐಟಿ ಮೂಲಸೌಲಭ್ಯ, ಸಕ್ಕರೆ ಕಾರ್ಖಾನೆ, ಟೆಕ್ನಿಕಲ್ ಟೆಕ್ಸ್‌ಟೈಲ್, ಕಂಪ್ರೆಸ್ಡ್ ಗ್ಯಾಸ್, ವೈಮಾಂತರಿಕ್ಷ, ಚಿನ್ನಾಭರಣ ತಯಾರಿಕೆ, ಎಲೆಕ್ಟ್ರಾನಿಕ್ಸ್, ಸಾಫ್ಟ್‌ವೇರ್ ಹಾಗೂ ಪಂಚತಾರಾ ಹೋಟೆಲ್ ನಿರ್ಮಾಣ ಯೋಜನೆಗಳಿಗೆ ನೀಡಿರುವ ಅನುಮೋದನೆಗಳಿಂದ ರಾಜ್ಯದಲ್ಲಿ ಹೊಸದಾಗಿ 14,525 ಉದ್ಯೋಗ ಅವಕಾಶಗಳು ಸೃಷ್ಟಿಯಾಗಲಿವೆ ಎಂದು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಈ ಯೋಜನೆಗಳಲ್ಲಿ ಬಾಗ್ಮನೆ ಕನ್‌ಸ್ಟ್ರಕ್ಷನ್ ಪ್ರೈವೇಟ್ ಲಿಮಿಟೆಡ್‌ನ 494 ಕೋಟಿ ಮೊತ್ತದ ಐಟಿ ಮೂಲಸೌಲಭ್ಯ ಅಭಿವೃದ್ಧಿ, ಕರ್ನಾಟಕ ಬಂಗಾರು ಷುಗರ್ಸ್‌ನ 443 ಕೋಟಿಯ ಸಕ್ಕರೆ ಕಾರ್ಖಾನೆ, ಕ್ಲೆನೆ ಪ್ಯಾಕ್ಸ್‌ನ 376 ಕೋಟಿಯ ಟೆಕ್ನಿಕಲ್ ಟೆಕ್ಸ್‌ಟೈಲ್ ಘಟಕ, ತ್ರಿಶೂಲ್ ಬಿಲ್ಡ್‌ಟೆಕ್ ಅಂಡ್ ಇನ್‌ಫ್ರಾಸ್ಟ್ರಕ್ಚರ್‌ನ 300 ಕೋಟಿ ವೆಚ್ಚದ ಪಂಚತಾರಾ ಹೋಟೆಲ್, ಮುಧೋಳದಲ್ಲಿ ಟ್ರೌಲ್ಟ್ ಗ್ರಾಸ್‌ನ 257 ಕೋಟಿ ವೆಚ್ಚದ ಕಂಪ್ರೆಸ್ಡ್ ಗ್ಯಾಸ್ ಘಟಕ, ತ್ಸುಯೊ ಮ್ಯಾನುಫ್ಯಾಕ್ಚರಿನ್‌ನ 250 ಕೋಟಿ ವೆಚ್ಚದಲ್ಲಿನ ವಿದ್ಯುತ್‌ಚಾಲಿತ ವಾಹನಗಳ ಮೋಟರ್ ಹಾಗೂ ಕಂಟ್ರೋಲರ್ ತಯಾರಿಕೆ ಘಟಕಗಳು ಪ್ರಮುಖವಾಗಿವೆ ಎಂದು ಸಚಿವರು ತಿಳಿಸಿದ್ದಾರೆ.

50 ಕೋಟಿಗೂ ಹೆಚ್ಚು ಹೂಡಿಕೆಯ 22 ಪ್ರಮುಖ ದೊಡ್ಡ ಮತ್ತು ಮಧ್ಯಮ ಕೈಗಾರಿಕಾ ಯೋಜನೆಗಳಿಗೆ ಅನುಮೋದನೆ ನೀಡಿರುವುದರಿಂದ ರಾಜ್ಯದಲ್ಲಿ 3908 ಕೋಟಿ ಹೂಡಿಕೆ ಆಗಲಿದೆ. 12,475 ಜನರಿಗೆ ಉದ್ಯೋಗಾವಕಾಶಗಳು ದೊರೆಯಲಿವೆ. 15 ಕೋಟಿಗಳಿಂದ 50 ಕೋಟಿ ಒಳಗಿನ ಹೂಡಿಕೆಯ 15 ಹೊಸ ಯೋಜನೆಗಳಿಗೆ ನೀಡಿರುವ ಅನುಮೋದನೆ ಫಲವಾಗಿ 350 ಕೋಟಿ ಹೂಡಿಕೆ ಆಗಲಿದ್ದು, 1,750 ಜನರಿಗೆ ಉದ್ಯೋಗಾವಕಾಶಗಳು ಸಿಗಲಿವೆ. ಹೆಚ್ಚುವರಿ ಹೂಡಿಕೆಯ 2 ಯೋಜನೆಗಳಿಗೆ ನೀಡಿರುವ ಅನುಮೋದನೆಯಿಂದ 565 ಕೋಟಿ ಹೂಡಿಕೆಯಾಗಲಿದ್ದು, 300 ಜನರಿಗೆ ಉದ್ಯೋಗಾವಕಾಶ ಸಿಗಲಿವೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಎನ್. ಸೆಲ್ವಕುಮಾರ್, ಕೈಗಾರಿಕಾ ಅಭಿವೃದ್ಧಿ ಆಯುಕ್ತರಾಗಿರುವ ಶ್ರೀಮತಿ ಗುಂಜನ್ ಕೃಷ್ಣ, ಕರ್ನಾಟಕ ಉದ್ಯೋಗ ಮಿತ್ರದ ವ್ಯವಸ್ಥಾಪಕ ನಿರ್ದೇಶಕ ದೊಡ್ಡ ಬಸವರಾಜು ಹಾಗೂ ಇತರ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಮೌನ ಕ್ರಾಂತಿ ಕನ್ನಡ ದಿನ ಪತ್ರಿಕೆ

# ಕರ್ನಾಟಕ ಪಬ್ಲಿಕ್ ಸ್ಕೂಲ್‌ನ ನೂತನ ಕೊಠಡಿಗಳ ಲೋಕಾರ್ಪಣೆ

ಶಿರಾ : ನಾಗಾಲೋಟದಲ್ಲಿ ಬೆಳೆಯುತ್ತಿರುವ ಶಿರಾ ಉದ್ಯೋಗಿ ನಗರ ಮಾಡಬೇಕೆಂಬ ಸಂಕಲ್ಪ ನಮ್ಮದಾಗಿದ್ದು, ಇದಕ್ಕೆ ಪೂರಕ ಶಿಕ್ಷಣ ಸಿಗಬೇಕೆಂಬ ಉದ್ದೇಶದಿಂದ ಶಿರಾದಲ್ಲಿ ಪಾಲಿಟೆಕ್ನಿಕ್ ಸ್ಥಾಪನೆ ಮಾಡಿ ಯುವಕರಿಗೆ ಉದ್ಯೋಗ ಸಿಗುವಂತಹ ಶಿಕ್ಷಣವನ್ನು ನೀಡುತ್ತಿದ್ದೇವೆ.

ಶಿರಾದಲ್ಲಿ ಕೈಗಾರಿಕಾ ವಲಯ ಅಭಿವೃದ್ಧಿ ಕಾಣಬೇಕು, ಹೆಚ್ಚು ಹೆಚ್ಚು ಕೈಗಾರಿಕೆಗಳು ಸ್ಥಾಪನೆಯಾಗಬೇಕೆಂಬ ಉದ್ದೇಶದಿಂದ ಕೈಗಾರಿಕಾ ವಲಯ ಪ್ರದೇಶಕ್ಕೆ 1300 ಎಕರೆ ಭೂಮಿ ನೀಡಲಾಗಿದ್ದು , ಕೈಗಾರಿಕೆಗಳು ಸ್ಥಾಪನೆಯಾಗಲು ಪೂರಕ ವಾತಾವರಣ ನಿರ್ಮಾಣ ಮಾಡಿದ್ದೇವೆ ಎಂದು ದೆಹಲಿ ವಿಶೇಷ ಪ್ರತಿನಿಧಿ, ಶಾಸಕ ಟಿ.ಬಿ. ಜಯಚಂದ್ರ ಹೇಳಿದರು.

ಶಿರಾ ತಾಲೂಕಿನ ಪಟ್ಟನಾಯಕನಹಳ್ಳಿ ಗ್ರಾಮದಲ್ಲಿ ಶಾಯಿ ಎಕ್ಸ್ ಪೋರ್ಟ್ ಕಂಪನಿಯವರು 1. ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಿರುವ ಕರ್ನಾಟಕ ಪಬ್ಲಿಕ್ ಸ್ಕೂಲ್ ನೂತನ ಕೊಠಡಿಗಳನ್ನು ಶನಿವಾರ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಮಾಜಿ ಪ್ರಧಾನಿ ಡಾ.ಮನ ಮೋಹನ್ ಸಿಂಗ್ ರವರು ಪ್ರಧಾನಮಂತ್ರಿಯಾಗಿದ್ದಾಗ ಕೈಗಾರಿಕಾ ಕಾಯ್ದೆ ಜಾರಿಗೊಳಿಸಿದ ಕಾರಣ ಕೈಗಾರಿಕೆಗಳಲ್ಲಿ ಬರುವ ಲಾಭಾಂಶದಲ್ಲಿ ವಿವಿಧ ಕಂಪನಿಗಳು ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಸೇವೆ ಮಾಡಲು ಅನುಕೂಲವಾಯಿತು.




ಈ ನಿಟ್ಟಿನಲ್ಲಿ ಶಾಯಿ ಎಕ್ಸ್ಪೋರ್ಟ್ ನವರು ಸರ್ಕಾರಿ ಶಾಲೆಗೆ ಒಂದು ಕೋಟಿ ರೂಪಾಯಿ ವೆಚ್ಚ ಮಾಡಿ ಶಾಲಾ ಕೊಠಡಿ ನಿರ್ಮಾಣ ಮಾಡಿಕೊಟ್ಟಿರುವ,ಅವರ ಶೈಕ್ಷಣಿಕ ಸೇವೆ ಮೆಚ್ಚುವಂಥದ್ದು.

ಬದಲಾಗುತ್ತಿರುವ ಜಗತ್ತಿನಲ್ಲಿ ತಂತ್ರಜ್ಞಾನ ಆಧಾರಿತ ಶಿಕ್ಷಣ ಅವಶ್ಯಕತೆ ಇದ್ದು ಇಂದಿನ ಸ್ಪರ್ಧಾತ್ಮಕ ಯುಗಕ್ಕೆ ಅನುಗುಣವಾಗಿ ವಿದ್ಯಾರ್ಥಿಗಳು ಶಿಕ್ಷಣ ಪಡೆದು ಯಶಸ್ವಿಯಾಗಬೇಕು ಎಂದರು.

ಕೊಠಡಿಗಳ ಉದ್ಘಾಟನೆ ನೆರವೇರಿಸಿ ಮಾತನಾಡಿದ ಶಾಹಿ ಎಕ್ಸ್ಪೋರ್ಟ್ ನ ಅರ್ಚನಾ ದೇಶದ ಶಕ್ತಿಯೇ ಶಿಕ್ಷಣ ಈ ಉದ್ದೇಶದಿಂದ ನಾವು ಶೈಕ್ಷಣಿಕ ಸೌಲಭ್ಯಗಳು ನೀಡಬೇಕೆಂಬ ಗುರಿ ಇಟ್ಟುಕೊಂಡು ನಮ್ಮ ಕಂಪನಿಯ ಲಾಭಾಂಶದಲ್ಲಿ ಇಂತಹ ಶೈಕ್ಷಣಿಕ ಸೇವೆ ನೀ ಡುತ್ತಿದ್ದೇವೆ, ಇಂತಹ ಸೇವೆಗಳು ಗ್ರಾಮೀಣ ಪ್ರದೇಶದ ಯುವಕರಿಗೆ ಹೆಚ್ಚು ಸಹಕಾರಿಯಾಗಲಿದೆ. ನಿಷ್ಠೆ ಪ್ರಾಮಾಣಿಕತೆಯಿಂದ ವಿದ್ಯೆ ಕಲಿತ ವಿದ್ಯಾರ್ಥಿ ಸಮಾಜದಲ್ಲಿ ಯಶಸ್ವಿಯ ವ್ಯಕ್ತಿಯಾಗಿ ರೂಪುಗೊಳ್ಳುತ್ತಾನೆ ಎಂದರು.

ಸೂಡ ಅಧ್ಯಕ್ಷ ಪಿ.ಆರ್. ಮಂಜುನಾಥ್,

ತಾಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಆರ್. ಹರೀಶ್, ಕ್ಷೇತ್ರ ಶಿಕ್ಷಣಾಧಿಕಾರಿ ಕೃಷ್ಣಪ್ಪ, ನಾದೂರು ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ತುಳಸಿ, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಕೆ.ಎಂ. ಶ್ರೀನಿವಾಸ್ಕರ್ನಾಟಕ ಪಬ್ಲಿಕ್ ಸ್ಕೂಲ್, ಉಪ ಪ್ರಾಂಶುಪಾಲ ಗಂಗಾಧರ, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ಮಂಜುನಾಥ್, ಗ್ರಾಮ ಪಂಚಾಯತಿ ಮಾಜಿ ಸದಸ್ಯ ನಾಗೇಶ್, ಮುಖ್ಯ ಶಿಕ್ಷಕಿ ಮಂಜುಳಾ, ನಿವೃತ್ತ ಶಿಕ್ಷಕ ಓಂಕಾರಪ್ಪ, ಶಾಹಿ ಎಕ್ಸ್ಪೋರ್ಟ್ ನ ನಾಗಯ್ಯ, ಮನು ಧನಂಜಯ, ಬಿ ಆರ್ ಸಿ ಭೂ ಗೇಂದ್ರ ನಾಯ್ಕ, ಶ್ರೀಧರ್, ಭೂತರಾಜ ಸೇರಿದಂತೆ ಹಲವಾರು ಶಿಕ್ಷಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು

# ವಿಧು ಶೇಖರ ಭಾರತೀ ಮಹಾಸ್ವಾಮಿಗಳವರು

## ಶ್ರೀ ವಿದ್ಯಾ ಚೌಡೇಶ್ವರಿ ಸನ್ನಿಧಿಗೆ ಶೃಂಗೇರಿ ಜಗದ್ಗುರುಗಳ ಆಗಮನ

ತುಮಕೂರು: ಶೃಂಗೇರಿ ಶ್ರೀ ಶಾರದಾ ಪೀಠದ ಜಗದ್ಗುರುಗಳಾದ ಶ್ರೀ ವಿಧು ಶೇಖರ ಭಾರತೀ ಸನ್ನಿಧಾನಂ ಅವರು ಮಾರ್ಚ್ 16 ರಂದು ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕಿನ ಕೆಜಿ ದೇವಪಟ್ಟಣದಲ್ಲಿರುವ ಶ್ರೀ ವಿದ್ಯಾ ಚೌಡೇಶ್ವರಿ ಅಮ್ಮನವರ ಪುಣ್ಯಕ್ಷೇತ್ರಕ್ಕೆ ದಿವ್ಯ ಭೇಟಿ ನೀಡಲಿದ್ದಾರೆ.

ಶೃಂಗೇರಿ ಶಾರದಾ ಪೀಠದ ಜಗದ್ಗುರುಗಳಾದ ವಿಧು ಶೇಖರ ಭಾರತೀ ಮಹಾಸ್ವಾಮಿಗಳವರು ಈ ಪುಣ್ಯಕ್ಷೇತ್ರಕ್ಕೆ ಆಗಮಿಸುತ್ತಿರುವುದು ಇಡೀ ಜಿಲ್ಲೆಯ ಭಕ್ತಾದಿಗಳಲ್ಲಿ ಹೆಚ್ಚಿನ ಹರ್ಷವನ್ನು ತಂದಿದೆ. ಅಂದು ಸಂಜೆ ಕ್ಷೇತ್ರಕ್ಕೆ ಆಗಮಿಸಲಿರುವ ಮಹಾಸ್ವಾಮಿಗಳಿಗೆ ದೇವಸ್ಥಾನದ ಸಮಿತಿಯ ವತಿಯಿಂದ ಭವ್ಯವಾದ ಪೂರ್ಣಕುಂಭ ಸ್ವಾಗತ ಮತ್ತು ಮಂಗಳವಾದ್ಯಗಳೊಂದಿಗೆ ಬರಮಾಡಿಕೊಳ್ಳಲಾಗುವುದು.

ನಂತರ ಮಹಾಸ್ವಾಮಿಗಳು ಶ್ರೀ ವಿದ್ಯಾ ಚೌಡೇಶ್ವರಿ ಅಮ್ಮನವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಲಿದ್ದಾರೆ. ಈ ಸಂದರ್ಭದಲ್ಲಿ ಭಕ್ತಾದಿಗಳಿಗೆ ಆಶೀರ್ವಚನ ನೀಡುವ ಸಭಾ ಕಾರ್ಯಕ್ರಮವೂ ನಡೆಯಲಿದೆ.

ಮಹಾಸ್ವಾಮಿಗಳ ಆಧ್ಯಾತ್ಮಿಕ ಸಂದೇಶ ಮತ್ತು ದಿವ್ಯ ಆಶೀರ್ವಾದವನ್ನು ಪಡೆಯಲು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ.



ಕಾರ್ಯಕ್ರಮದ ಅಂತಿಮ ಹಂತದಲ್ಲಿ ಮಹಾಸ್ವಾಮಿಗಳು ಭಕ್ತರಿಗೆ ಫಲಮಂತ್ರಾಕ್ಷತೆ ವಿತರಣೆ ಮಾಡಲಿದ್ದಾರೆ. ಈ ಪುಣ್ಯಕ್ಷೇತ್ರದ ವತಿಯಿಂದ ತೀರ್ಥ ಪ್ರಸಾದದ ವ್ಯವಸ್ಥೆಯನ್ನೂ ಮಾಡಲಾಗಿದೆ. ಈ ಐತಿಹಾಸಿಕ ಮತ್ತು ಆಧ್ಯಾತ್ಮಿಕ ಘಟನೆಯಲ್ಲಿ ಪಾಲ್ಗೊಳ್ಳಲು ಮತ್ತು ಶೃಂಗೇರಿ ಜಗದ್ಗುರುಗಳ ದಿವ್ಯ ಆಶೀರ್ವಾದ ಪಡೆಯಲು ಸಮಸ್ತ ಭಕ್ತಾದಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕೋರಲಾಗಿದೆ.

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:**
ಶೃಂಗೇರಿ ಶ್ರೀ ಶಾರದಾ ಪೀಠದ ಶ್ರೀ ವಿದ್ಯಾ ಚೌಡೇಶ್ವರಿ ಅಮ್ಮನವರ ಪುಣ್ಯಕ್ಷೇತ್ರ
ಫೋನ್ ಸಂಖ್ಯೆಗಳು: 99866 49530 / 81975 41733

# ಕೋಮಾ ಸ್ಥಿತಿಯಲ್ಲಿ ಹಾಸಿಗೆಯಲ್ಲೇ ಅಚೇತನವಾಗಿ ಮಲಗಿಸುವ ಕೋಮಾ ಮತ್ತು ಬ್ರೈನ್ ಡೆಡ್ಗೂ ಏನೆಲ್ಲಾ ವ್ಯತ್ಯಾಸ..?

ಹರೀಶ್ ರಾಣಾ ಸುಮಾರು 13 ವರ್ಷಗಳಿಂದ ಹಾಸಿಗೆಯ ಮೇಲೆ ಪ್ರಜ್ಞಾಹೀನ ಸ್ಥಿತಿಯಲ್ಲಿ ಮಲಗಿದ್ದರು. ಈಗ ಸುಪ್ರೀಂ ಕೋರ್ಟ್ ಅವರಿಗೆ ದಯಾಮರಣಕ್ಕೆ ಅನುಮತಿ ನೀಡಿದೆ. ಆದರೆ ಈ ಪ್ರಕರಣವು ಕೆಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಕೋಮಾ ಮತ್ತು ಬ್ರೈನ್ ಡೆಡ್ ನಡುವಿನ ವ್ಯತ್ಯಾಸವೇನು, ಕೋಮಾದಲ್ಲಿ ಏನಾಗುತ್ತದೆ ಮತ್ತು ಅದು ಮೆದುಳು ನಿಷ್ಕ್ರಿಯವಾಗುವುದಕ್ಕಿಂತ ಹೇಗೆ ಭಿನ್ನವಾಗಿದೆ? ಈ ಎರಡು ಪರಿಸ್ಥಿತಿಗಳಲ್ಲಿ ವೈದ್ಯಕೀಯ ಹಾಗೂ ಕಾನೂನು ನಿರ್ಧಾರಗಳು ಏಕೆ ಬೇರೆಬೇರೆ ಆಗಿರುತ್ತವೆ ಎಂಬುದನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ. ಈ ಬಗ್ಗೆ ಮತ್ತಷ್ಟು ಮಾಹಿತಿ ಸ್ಟೋರಿಯಲ್ಲಿದೆ.

ಬಹು ವರ್ಷಗಳಿಂದ ಕೋಮಾ ಸ್ಥಿತಿಯಲ್ಲಿ ಹಾಸಿಗೆಯಲ್ಲೇ ಅಚೇತನವಾಗಿ ಮಲಗಿದ್ದ ಹರೀಶ್ ರಾಣಾಗೆ ಸುಪ್ರೀಂ ಕೋರ್ಟ್ ದಯಾಮರಣಕ್ಕೆ ಅನುಮತಿ ನೀಡಿದೆ. ಈ ಹಿನ್ನೆಲೆಯಲ್ಲಿ ಕೋಮಾ ಮತ್ತು ಬ್ರೈನ್ ಡೆಡ್ ಎಂಬ ಎರಡು ವೈದ್ಯಕೀಯ ಸ್ಥಿತಿಗಳ ಬಗ್ಗೆ ಚರ್ಚೆ ಹೆಚ್ಚಾಗಿದೆ. ಇವು ಎರಡೂ ಗಂಭೀರ ಸ್ಥಿತಿಗಳಾಗಿದ್ದರೂ, ವೈದ್ಯಕೀಯ ಹಾಗೂ ಕಾನೂನು ದೃಷ್ಟಿಯಿಂದ ದೊಡ್ಡ ವ್ಯತ್ಯಾಸಗಳಿವೆ. ಈ ಪ್ರಕರಣದಿಂದ ಒಂದು ಪ್ರಮುಖ ಪ್ರಶ್ನೆ ಎದುರಾಗಿದೆ. ಹರೀಶ್ ರಾಣಾ ಸುಮಾರು 13 ವರ್ಷಗಳಿಂದ ಕೋಮಾ ಸ್ಥಿತಿಯಲ್ಲಿ ಹಾಸಿಗೆಯಲ್ಲೇ ಇದ್ದು, ಎಐಐಎಂಎಸ್ ವೈದ್ಯರ ಮೆಡಿಕಲ್ ಬೋರ್ಡ್ ಅವರು ಪರಿಶೀಲಿಸಿ, ಅವರ ಚೇತರಿಕೆಯ ಸಾಧ್ಯತೆ ಇಲ್ಲ ಎಂದು ತಿಳಿಸಿತ್ತು. ಹಾಗಾಗಿ ದಯಾಮರಣಕ್ಕೆ ನ್ಯಾಯಾಲಯದ ಅನುಮತಿ ಅಗತ್ಯವಾಯಿತು. ಆದರೆ ಯಾರಾದರೂ "ಬ್ರೈನ್ ಡೆಡ್" ಆಗಿದ್ದರೆ ಸಾಮಾನ್ಯವಾಗಿ ನ್ಯಾಯಾಲಯದ ಅನುಮತಿ ಬೇಕಾಗುವುದಿಲ್ಲ. ಅಂತಹ ಸಂದರ್ಭಗಳಲ್ಲಿ ಬೇರೆ ವಿಧಾನ ಅನುಸರಿಸಲಾಗುತ್ತದೆ ಮತ್ತು ಅಂಗದಾನಕ್ಕೂ ಅನುಮತಿ ನೀಡಬಹುದು. ಆದರೆ ಕೋಮಾ ಮತ್ತು



ಬ್ರೈನ್ ಡೆಡ್ ನಡುವಿನ ವ್ಯತ್ಯಾಸವೇನು, ಈ ಎರಡು ಪರಿಸ್ಥಿತಿಗಳಲ್ಲಿ ವೈದ್ಯಕೀಯ ಹಾಗೂ ಕಾನೂನು ನಿರ್ಧಾರಗಳು ಏಕೆ ಬೇರೆಬೇರೆ ಆಗಿರುತ್ತವೆ ಎಂಬುದನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ. ಈ ಬಗ್ಗೆ ಮತ್ತಷ್ಟು ಮಾಹಿತಿ ಸ್ಟೋರಿಯಲ್ಲಿದೆ.

### ಕೋಮಾ ಎಂದರೇನು?

ಸಾಮಾನ್ಯವಾಗಿ ಕೋಮಾ ಎನ್ನುವುದು ಗಂಭೀರವಾದ ಮೆದುಳಿನ ಸ್ಥಿತಿ. ಈ ಸಂದರ್ಭದಲ್ಲಿ ವ್ಯಕ್ತಿ ಗಾಢ ಅಚೇತನ ಸ್ಥಿತಿಗೆ ಹೋಗುತ್ತಾನೆ. ಅವನು ಕಣ್ಣು ತೆರೆಯಲು ಸಾಧ್ಯವಿಲ್ಲ, ಮಾತನಾಡಲು ಸಾಧ್ಯವಿಲ್ಲ ಮತ್ತು ದೇಹದ ಚಲನೆಯೂ ಇರುವುದಿಲ್ಲ. ಆದರೆ ಈ ಸ್ಥಿತಿಯಲ್ಲಿ ಮೆದುಳಿನ ಕೆಲವು ಭಾಗಗಳು ಇನ್ನೂ ಕಾರ್ಯನಿರ್ವಹಿಸುತ್ತಿರುತ್ತವೆ. ರೋಗಿ ಉಸಿರಾಡುತ್ತಿರುತ್ತಾನೆ ಅವನ ಹೃದಯದ ಬಡಿತ ನಿಂತಿರುವುದಿಲ್ಲ. ಕೆಲವರು ಕೆಲವು ದಿನಗಳು, ವಾರಗಳು ಅಥವಾ ತಿಂಗಳುಗಳ ನಂತರ ಕೋಮಾದಿಂದ ಹೊರಬರುವ ಸಾಧ್ಯತೆ ಇರುತ್ತದೆ. ಕೆಲ ಸಂದರ್ಭಗಳಲ್ಲಿ ವರ್ಷಗಳ ಕಾಲವೂ ಇದೆ ಸ್ಥಿತಿ ಮುಂದುವರಿಯಬಹುದು. ವೈದ್ಯರು ಸಾಮಾನ್ಯವಾಗಿ ರೋಗಿಯ ಸ್ಥಿತಿಯನ್ನು ನೋಡಿ, ಕೋಮಾ ಎಷ್ಟು ಕಾಲ ಇರಬಹುದು ಮತ್ತು ಚೇತರಿಕೆಯ ಸಾಧ್ಯತೆ ಏನು ಎಂದು ಅಂದಾಜು ಮಾಡುತ್ತಾರೆ. ಆದರೆ ಕೆಲವೊಮ್ಮೆ ನಿಖರವಾಗಿ ಹೇಳುವುದು ಕೂಡ ಕಷ್ಟವಾಗಬಹುದು.

### ಬ್ರೈನ್ ಡೆಡ್ ಎಂದರೇನು?

ಸಾಮಾನ್ಯವಾಗಿ ಬ್ರೈನ್ ಡೆತ್ ಎನ್ನುವುದು ಮೆದುಳು ಸಂಪೂರ್ಣವಾಗಿ ಕೆಲಸ ಮಾಡುವುದನ್ನು ನಿಲ್ಲಿಸಿದ ಸ್ಥಿತಿ. ಈ ಸಂದರ್ಭದಲ್ಲಿ ಮೆದುಳಿನ ಎಲ್ಲಾ ಕಾರ್ಯಗಳು ಸಂಪೂರ್ಣವಾಗಿ ಸ್ಥಗಿತವಾಗಿರುತ್ತವೆ. ವೈದ್ಯರ ವಿಶೇಷ ತಂಡ ಪರೀಕ್ಷೆ ನಡೆಸಿ, ವ್ಯಕ್ತಿಯನ್ನು "ಬ್ರೈನ್ ಡೆಡ್" ಎಂದು ಘೋಷಿಸುತ್ತದೆ. ವೈದ್ಯಕೀಯ ಮತ್ತು ಕಾನೂನು ದೃಷ್ಟಿಯಿಂದ ಇದನ್ನು ಮರಣವೆಂದು ಪರಿಗಣಿಸಲಾಗುತ್ತದೆ. ಇಂತಹ ಸಂದರ್ಭಗಳಲ್ಲಿ ಅಂಗದಾನ ಮಾಡಲು ಸಹ ಕಾನೂನು ಅನುಮತಿ ದೊರೆಯುತ್ತದೆ.

### ವೈದ್ಯರು ಹೇಗೆ ನಿರ್ಧರಿಸುತ್ತಾರೆ?

ದೆಹಲಿ ಜಿಬಿ ಪಂತ್ ಆಸ್ಪತ್ರೆಯ ನ್ಯೂರೋಸರ್ಜರಿ ವಿಭಾಗದ ಮಾಜಿ ಮುಖ್ಯಸ್ಥರಾದ ಡಾ. ದಲ್ಜೀತ್ ಸಿಂಗ್ ಅವರ ಪ್ರಕಾರ, ವೈದ್ಯರು ಹಲವು ನ್ಯೂರಾಲಜಿಕಲ್ ಪರೀಕ್ಷೆಗಳ ಮೂಲಕ ರೋಗಿ ಕೋಮಾ ಸ್ಥಿತಿಯಲ್ಲಿದ್ದಾನೆಯೋ ಅಥವಾ ಬ್ರೈನ್ ಡೆಡ್ ಆಗಿದೆಯೋ ಎಂದು ನಿರ್ಧರಿಸುತ್ತಾರೆ. ಬ್ರೈನ್ ಡೆಡ್ ಆಗಿದ್ದರೆ ಕಾನೂನು ಪ್ರಕಾರ ವ್ಯಕ್ತಿಯನ್ನು ಮೃತ ಎಂದು ಪರಿಗಣಿಸಲಾಗುತ್ತದೆ. ಆದರೆ ಕೋಮಾ ಸ್ಥಿತಿಯಲ್ಲಿ ಚೇತರಿಕೆಯ ಸಾಧ್ಯತೆ ಇರುವುದರಿಂದ ವ್ಯಕ್ತಿಯನ್ನು ಮೃತ ಎಂದು ಪರಿಗಣಿಸಲಾಗುವುದಿಲ್ಲ.

ಕೋಮಾ ಪ್ರಕರಣಗಳಲ್ಲಿ ನ್ಯಾಯಾಲಯದ ಅನುಮತಿ ಏಕೆ ಅಗತ್ಯ?

ಸಾಮಾನ್ಯವಾಗಿ ಕೋಮಾ ಸ್ಥಿತಿಯಲ್ಲಿ ರೋಗಿಯಲ್ಲಿ ಚೇತರಿಕೆಯ




ಸಾಧ್ಯತೆ ಇರುವುದರಿಂದ ಲೈಫ್ ಸಪೋರ್ಟ್ ವ್ಯವಸ್ಥೆಯನ್ನು ತೆಗೆದುಹಾಕುವುದು ಸೂಕ್ಷ್ಮ ಹಾಗೂ ಕಾನೂನು ಸಂಬಂಧಿತ ವಿಷಯವಾಗುತ್ತದೆ. ವೈದ್ಯರು ಅಥವಾ ಕುಟುಂಬ ಸದಸ್ಯರು ಸ್ವತಃ ಈ ನಿರ್ಧಾರ ಕೈಗೊಳ್ಳಲು ಸಾಧ್ಯವಿಲ್ಲ. ಈ ಕಾರಣದಿಂದ ಇಂತಹ ಸಂದರ್ಭಗಳಲ್ಲಿ ನ್ಯಾಯಾಲಯದ ಅನುಮತಿ ಪಡೆಯಬೇಕು. ನ್ಯಾಯಾಲಯವು ವೈದ್ಯಕೀಯ ಮಂಡಳಿಯ ವರದಿ, ರೋಗಿಯ ಸ್ಥಿತಿ ಮತ್ತು ಚೇತರಿಕೆಯ ಸಾಧ್ಯತೆಗಳನ್ನು ಪರಿಶೀಲಿಸಿ ತೀರ್ಮಾನ ಕೈಗೊಳ್ಳುತ್ತದೆ. ಹೀಗಾಗಿ ಕೋಮಾ ಮತ್ತು ಬ್ರೈನ್ ಡೆಡ್ ಎರಡೂ ಗಂಭೀರ ವೈದ್ಯಕೀಯ ಸ್ಥಿತಿಗಳಾಗಿದ್ದರೂ, ಮೆದುಳಿನ ಕಾರ್ಯ ಮತ್ತು ಕಾನೂನು ಮಾನ್ಯತೆಯ ದೃಷ್ಟಿಯಿಂದ ಅವುಗಳಲ್ಲಿ ಪ್ರಮುಖ ವ್ಯತ್ಯಾಸಗಳಿವೆ.

# ಒಡಿಶಾ 'ಕೈ' ಶಾಸಕರಿಗೆ ಟ್ರಬಲ್ ಶೂಟರ್ ಡಿಕೆಶಿ ಆತಿಥ್ಯ: 'ಆಪರೇಷನ್ ಕಮಲ' ತಡೆಗೆ ಕೈಗೊಂಡ ಮುನ್ನೆಚ್ಚರಿಕಾ ಕ್ರಮ; ಕಾಂಗ್ರೆಸ್ ಸಮರ್ಥನೆ

ಬೆಂಗಳೂರು: ಮಾ.16ರ ರಾಜ್ಯಸಭೆ ಚುನಾವಣೆ ವೇಳೆ ಆಪರೇಷನ್ ಕಮಲ ಭೀತಿ ಹಿನ್ನೆಲೆಯಲ್ಲಿ ಒಡಿಶಾದ 8 ಮಂದಿ ಶಾಸಕರನ್ನು ಕಾಂಗ್ರೆಸ್ ಕರ್ನಾಟಕಕ್ಕೆ ರವಾನಿಸಿದ್ದು, ಕಾಂಗ್ರೆಸ್ಸಿನ ಟ್ರಬಲ್ ಶೂಟರ್ ಖ್ಯಾತಿಯ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಅತಿಥ್ಯ ಹೊತ್ತುಕೊಂಡಿದ್ದಾರೆ.

ಒಡಿಶಾದಲ್ಲಿ 4 ಸ್ಥಾನಗಳಿಗೆ ಚುನಾವಣೆ ನಡೆಯುತ್ತಿದ್ದು, 4ನೇ ಸ್ಥಾನಕ್ಕೆ ಯಾವ ಪಕ್ಷಕ್ಕೂ ಬಹುಮತವಿಲ್ಲ. ಹೀಗಾಗಿ ಶಾಸಕರ ಖರೀದಿ ನಡೆಯುವ ಭೀತಿ ಶುರುವಾಗಿದೆ.

ಒಡಿಶಾ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಭಕ್ತ ಚರಣ್ ದಾಸ್ ನೇತೃತ್ವದಲ್ಲಿ ಎಂಟು ಮಂದಿ ಕಾಂಗ್ರೆಸ್ ಶಾಸಕರು ಗುರುವಾರ ರಾತ್ರಿ ಬೆಂಗಳೂರಿಗೆ ಆಗಮಿಸಿದ್ದಾರೆ. ಬಿಡದಿ ಬಳಿಯ ವಂಡರ್ ಲಾ ರೆಸಾರ್ಟ್ ನಲ್ಲಿ ಈ ಶಾಸಕರಿಗೆ ಡಿಕೆ.ಶಿವಕುಮಾರ್ ಅವರು ವ್ಯವಸ್ಥೆ ಮಾಡಿದ್ದಾರೆ. ಅಶೋಕ್ ಕುಮಾರ್ ದಾಸ್, ಡಾ.ಸಿ.ಎಸ್. ರಾಜೇನ್ ಎಕ್ಕಾ, ಕದ್ರಕ ಅಪ್ಪಲಸ್ವಾಮಿ, ಮಂಗು ಖಿಲ್ಲಾ, ನೀಲಮಾಧಬ್ ಹಿಕಾಕಾ, ಪಬಿತ್ರ ಸೌಂತ, ಪ್ರಫುಲ್ಲ ಚಂದ್ರ ಪ್ರಧಾನ್ ಮತ್ತು ಸತ್ಯಜೀತ್ ಗೊಮಾಂಗೊ ಸೇರಿದಂತೆ ಇತರರು ಬೆಂಗಳೂರಿಗೆ ಆಗಮಿಸಿದ್ದಾರೆ.

ಈ ನಡುವೆ ಒಡಿಶಾದ ಕಾಂಗ್ರೆಸ್ ಶಾಸಕರನ್ನು ಬೆಂಗಳೂರಿಗೆ ಕರೆದೊಯ್ಯಲಾಗಿದೆ ಎಂಬ ವಿಚಾರಕ್ಕೆ ಕಾಂಗ್ರೆಸ್ ಪಕ್ಷ ಸ್ಪಷ್ಟನೆ ನೀಡಿದ್ದು, ಬಿಜೆಪಿ ನಡೆಸಬಹುದಾದ 'ಕುದುರೆ ವ್ಯಾಪಾರ'ವನ್ನು ತಡೆಯಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಮರ್ಥಿಸಿಕೊಂಡಿದೆ.





ಈ ಶಾಸಕರಿಗೆ ಆತಿಥ್ಯ ನೀಡುತ್ತಿರುವವರುಉಪಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಶಾಸಕರನ್ನು ಭೇಟಿಯಾದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ರಾಜ್ಯಸಭೆ ಚುನಾವಣೆಯಲ್ಲಿ ಪಕ್ಷ ಬೆಂಬಲಿತ ಸ್ವತಂತ್ರ ಅಭ್ಯರ್ಥಿ ದಿಲೀಪ್ ರಾಯ್ ಅವರಿಗೆ ಬೆಂಬಲ ನೀಡುವಂತೆ ಒತ್ತಡ ಹಾಗೂ ಆಮಿಷಗಳು ನೀಡಲಾಗುತ್ತಿವೆ ಎಂಬ ಮಾಹಿತಿ ಶಾಸಕರು ನೀಡಿದರು ಎಂದು ಹೇಳಿದರು.

ವಿರೋಧ ಪಕ್ಷದಿಂದ ಬೆದರಿಕೆಗಳು ಮತ್ತು ಆಫರ್‌ಗಳು ಬಂದಿವೆ. ಶಾಸಕರನ್ನು ರಕ್ಷಿಸುವುದು ನಮ್ಮ ಕರ್ತವ್ಯ. ಅವರಿಗೆ 'ಆಪರೇಷನ್ ಲೋಟಸ್' ಭಾಗವಾಗಲು ಇಷ್ಟವಿಲ್ಲ. ಸ್ವಇಚ್ಛೆಯಿಂದ ಇಲ್ಲಿ ಬಂದಿದ್ದಾರೆಂದು ತಿಳಿಸಿದರು.

ಈ ನಡುವೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಪ್ರತಿಕ್ರಿಯಿಸಿ, ಕಾಂಗ್ರೆಸ್‌ಗೆ ತನ್ನದೇ ಶಾಸಕರ ಮೇಲೆ ನಂಬಿಕೆ ಇಲ್ಲ ಎಂದು ಟೀಕಿಸಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಡಿಕೆ.ಶಿವಕುಮಾರ್ ಅವರು, "ಕರ್ನಾಟಕದಲ್ಲಿ 'ಆಪರೇಷನ್ ಲೋಟಸ್' ನಡೆಸಿದವರು ಯಾರು?" ಎಂದು ಪ್ರಶ್ನಿಸಿ ತಿರುಗೇಟು ನೀಡಿದ್ದಾರೆ.

ಏತನ್ಮಧ್ಯ ಒಡಿಶಾ ಕಾಂಗ್ರೆಸ್‌ನ ಒಟ್ಟು 14 ಶಾಸಕರ ಪೈಕಿ ಕೇವಲ ಎಂಟು ಮಂದಿ ಮಾತ್ರ ಬೆಂಗಳೂರಿಗೆ ಬಂದಿದ್ದು, ಪಕ್ಷದೊಳಗಿನ ಭಿನ್ನಾಭಿಪ್ರಾಯಗಳು ಬಹಿರಂಗವಾಗುವಂತೆ ಮಾಡಿದೆ.

ಇದಕ್ಕೆ ಪ್ರತಿಕ್ರಿಯೆ ನೀಡಿರುವ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ರಾಮಚಂದ್ರ ಕದಮ್ ಅವರು ವಿಧಾನಸಭೆ ಅಧಿವೇಶನದ ಕಾರಣದಿಂದ ಭುವನೇಶ್ವರದಲ್ಲೇ ಉಳಿದ ಶಾಸಕರು ಇದ್ದಾರೆ. ಮತ್ತೊಬ್ಬ ಶಾಸಕ ದಾಶರಥಿ ಗೊಮಾಂಗೊ ತಮ್ಮ ಕ್ಷೇತ್ರದಲ್ಲಿದ್ದ ಕಾರಣ ವಿಮಾನ ಮಿಸ್ ಮಾಡಿಕೊಂಡಿದ್ದಾರೆ. ನಂತರ ಬೆಂಗಳೂರಿಗೆ ಹೊರಟಿದ್ದಾರೆ ಎಂದು ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಲಭ್ಯತೆಯನ್ನು ಅವಲಂಬಿಸಿ ಶಾಸಕರು ಬೆಂಗಳೂರಿನಲ್ಲಿ ಅಥವಾ ನವದೆಹಲಿಯಲ್ಲಿ ಭೇಟಿ ನೀಡಲಿದ್ದಾರೆ. ಎಲ್ಲಾ ಶಾಸಕರು ರಾಜ್ಯಾಧ್ಯಕ್ಷರೊಂದಿಗೆ ಮಾರ್ಚ್ 16 ರಂದು ಮತ ಚಲಾಯಿಸಲು ಭುವನೇಶ್ವರಕ್ಕೆ ಹಿಂತಿರುಗುತ್ತಾರೆಂದು ಹೇಳಿದ್ದಾರೆ.

ಇದೇ ವೇಳೆ ಕಟಕ್ ಬರಾಬತಿ ಕ್ಷೇತ್ರದ ಶಾಸಕಿ ಸೋಫಿಯಾ ಫಿರ್ದೌಸ್ ಅವರು ಈ ಭೇಟಿಯ ಬಗ್ಗೆ ಯಾವುದೇ ಮಾಹಿತಿ ಇರಲಿಲ್ಲ ಎಂದು ಹೇಳಿ ಅಚ್ಚರಿ ವ್ಯಕ್ತಪಡಿಸಿದ್ದಾರೆ.

"ಶಾಸಕರು ಸ್ಥಳಾಂತರಗೊಂಡಿರುವ ಕುರಿತು ಕೇಳಿದ್ದೇನೆ, ಆದರೆ, ಅದರ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಎಲ್ಲಿಗೂ ಹೋಗುವಂತೆ ನಮಗೆ ಯಾರೂ ಹೇಳಿಲ್ಲ. ನಾವು ನಮ್ಮದೇ ಆದ ನಿರ್ಧಾರಗಳನ್ನು ತೆಗೆದುಕೊಳ್ಳಬಹುದು. ಜನರಿಂದ ಆಯ್ಕೆಯಾದ ನಂತರ ನಾನು ಇಲ್ಲಿದ್ದೇನೆ, ನಾನೇಕೆ ಬೇರೆಡೆ ಹೋಗಲಿ ಎಂದು ಪ್ರಶ್ನಿಸಿದರು.

ಹಿರಿಯ ಕಾಂಗ್ರೆಸ್ ಶಾಸಕ ತಾರಾ ಪ್ರಸಾದ್ ಬಹಿನಿಪತಿ ಅವರು ಮಾತನಾಡಿ, ಶಾಸಕರು ಸ್ವಯಂ ಇಚ್ಛೆಯಿಂದಲೇ ಪ್ರಯಾಣಿಸಿದ್ದಾರೆ ಎಂದು ಹೇಳಿದ್ದು, ಈ ಭೇಟಿಯ ಹಿಂದೆ ಯಾವುದೇ ರಾಜಕೀಯ ಉದ್ದೇಶವಿಲ್ಲ. ಯಾರನ್ನೂ ಬಲವಂತವಾಗಿ ಕರೆದೊಯ್ದಿಲ್ಲ. ಅವರು ಎರಡು ದಿನಗಳ ಕಾಲ ಹೋಗಿ ಸ್ವಲ್ಪ ವಿಶ್ರಾಂತಿ ಮಾಡಿಕೊಂಡು ನಂತರ ಹಿಂತಿರುಗುತ್ತಾರೆಂದು ಹೇಳಿದ್ದಾರೆ.

ಏತನ್ಮಧ್ಯೆ ರಾಜ್ಯಸಭೆ ಚುನಾವಣೆ ಮಾರ್ಚ್ 16ರಂದು ನಡೆಯಲಿದ್ದು, ಮತದಾನಕ್ಕೂ ಮುನ್ನ ಎಲ್ಲಾ ಶಾಸಕರು ಮರಳಿ ಭುವನೇಶ್ವರಕ್ಕೆ ಹಿಂತಿರುಗಲಿದ್ದಾರೆ ಎಂದು ಪಕ್ಷದ ನಾಯಕರು ತಿಳಿಸಿದ್ದಾರೆ.

# ಎಸ್ ಎಸ್ ಎಲ್ ಸಿ ಪರೀಕ್ಷೆಗೆ ಸಕಲ ಸಿದ್ಧತೆ: ತಹಶೀಲ್ದಾರ್ ಮೋಹನ್ ಕುಮಾರ್

ತಿಪಟೂರು : 2025-26 ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 1115 ಬಾಲಕಿಯರು ಮತ್ತು 1153 ಬಾಲಕರು ಸೇರಿದಂತೆ ಒಟ್ಟು 2268 ವಿದ್ಯಾರ್ಥಿಗಳು ತಾಲ್ಲೂಕು ಹಾಗೂ ಗ್ರಾಮಾಂತರ ಪ್ರದೇಶದ 9 ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗುವುದು ಎಂದು ತಹಶೀಲ್ದಾರ್ ಮೋಹನ್‌ಕುಮಾರ್ ತಿಳಿಸಿದರು.

ಪ್ರತಿಯೊಂದು ಕೇಂದ್ರಕ್ಕೂ 9 ಮುಖ್ಯ ಅಧೀಕ್ಷಕರು, 9 ಪ್ರಶ್ನೆಪತ್ರಿಕೆ ಮತ್ತು ಉತ್ತರಪತ್ರಿಕೆ ಅಭಿರಕ್ಷಕರು ಹಾಗೂ 9 ಮೊಬೈಲ್ ಸ್ವಾಧೀನಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಎಂದರು.

ಉಪಖಜಾನೆ ಸಹಾಯಕ ನಿರ್ದೇಶಕರು ಪ್ರಶ್ನೆಪತ್ರಿಕೆ ವಿತರಣೆಗೆ ಸಹಕಾರ ನೀಡಲಿದ್ದು, ಪೊಲೀಸ್ ಇಲಾಖೆ ವತಿಯಿಂದ ಪರೀಕ್ಷೆಗಳು ಸುಸೂತ್ರವಾಗಿ ನಡೆಯಲು ಅಗತ್ಯ ಪೊಲೀಸ್ ಸಿಬ್ಬಂದಿಯನ್ನು ಪ್ರಶ್ನೆಪತ್ರಿಕೆ ಮತ್ತು ಉತ್ತರಪತ್ರಿಕೆ ಕಡತಗಳನ್ನು ಸಾಗಿಸುವ ವಾಹನಗಳಿಗೆ ಪೊಲೀಸ್ ಭದ್ರತೆ ಒದಗಿಸಲಾಗುತ್ತದೆ ಎಂದು ಹೇಳಿದರು.

ಬೆಸ್ಕಾಂ ಇಲಾಖೆಗೆ ಪರೀಕ್ಷಾ ದಿನಗಳಲ್ಲಿ ನಿರಂತರ ವಿದ್ಯುತ್ ಪೂರೈಕೆ ಮಾಡಲು ಸೂಚನೆ ನೀಡಿದ್ದು, ಉಪವಿಭಾಗಾಧಿಕಾರಿಗಳು, ತಹಶೀಲ್ದಾರರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಮೇಲ್ವಿಚಾರಣೆ ನಡೆಸಲಿದ್ದಾರೆ.

ತಾಲೂಕು ಆರೋಗ್ಯಾಧಿಕಾರಿಗಳ ಮೂಲಕ ಪ್ರತಿ ಪರೀಕ್ಷಾ ಕೇಂದ್ರಕ್ಕೂ ಹಿರಿಯ ಅಥವಾ ಕಿರಿಯ ಆರೋಗ್ಯ ಸಹಾಯಕರನ್ನು ಓ.ಆರ್.ಎಸ್ ಪೌಡರ್ ಮತ್ತು ತುರ್ತ ಚಿಕಿತ್ಸಾ ಕಿಟ್‌ಗಳೊಂದಿಗೆ ನಿಯೋಜಿಸಲು ಕ್ರಮ ಕೈಗೊಳ್ಳಲಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯಲ್ಲಿ



ನಿಷೇಧಾಜ್ಞೆ(ಸೆಕ್ಷನ್ 163) ಜಾರಿಗೊಳಿಸಲಾಗಿದೆ. ಕೇಂದ್ರಗಳ ಸುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಉಚಿತ ಬಸ್ ವ್ಯವಸ್ಥೆ ಹಾಗೂ ಹೆಚ್ಚುವರಿ ಬಸ್ ಸೌಲಭ್ಯ ಕಲ್ಪಿಸಲು ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ಮನವಿ ಮಾಡಲಾಗಿದೆ

ಕ್ಷೇತ್ರ ಶಿಕ್ಷಣಾಧಿಕಾರಿ ತಾರಾಮಣಿ ಮಾತನಾಡಿ, ಮೂರು ಪೂರ್ವಸಿದ್ಧತಾ ಪರೀಕ್ಷೆಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಶೇಕಡಾ 93 ಫಲಿತಾಂಶ ಪಡೆದು ಪ್ರಥಮ ಸ್ಥಾನ ಪಡೆದಿದ್ದು, ಹಿಂದುಳಿದ ವಿದ್ಯಾರ್ಥಿಗಳಿಗಾಗಿ ವಿಶೇಷ ತರಗತಿಗಳನ್ನು ನಡೆಸಲಾಗಿದೆ. ಪ್ರತಿದಿನ ವಿಷಯವಾರು ಶಿಕ್ಷಕರೊಂದಿಗೆ ಸಂವಾದ ನಡೆಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಾಗಿದೆ. ರಂಗಾಪುರ, ನೊಣವಿನಕೆರೆ, ಕಾಡಸಿದ್ದೇಶ್ವರ ಮಠ (ಮಣಕಿಕೆರೆ) ಹಾಗೂ ತಾಲೂಕಿನ ನಾಲ್ಕು ವಸತಿ ಶಾಲೆಗಳಲ್ಲಿ ರಾತ್ರಿ ತರಗತಿಗಳನ್ನು ಕೂಡ ನಡೆಸಲಾಗಿದೆ ಎಂದರು.

ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು, ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜು, ಎನ್‌ಎಸ್‌ಎಮ್ ಬಾಲಿಕ ಪ್ರೌಢಶಾಲೆ, ಸ್ಟೆಲ್ಲಾ ಮೇರೀಸ್ ಪ್ರೌಢಶಾಲೆ, ಕರ್ನಾಟಕ ಪಬ್ಲೀಕ್ ಶಾಲೆ ನೊಣವಿನಕೆರೆ, ಕರ್ನಾಟಕ ಪಬ್ಲೀಕ್ ಶಾಲೆ ಹೊನ್ನವಳ್ಳಿ, ಶ್ರೀಮದ್ ರಂಬಾಪುರಿ ಆಂಗ್ಲ ಪ್ರೌಢಶಾಲೆ ಕೆ.ಬಿ.ಕ್ರಾಸ್ ಹೆಚ್.ಎಮ್.ಸಿ.ಜಿ ಪ್ರೌಢಶಾಲೆ ಹಾಲ್ಕುರಿಕೆ, ಎಸ್.ಪಿ.ಎಸ್,ಜೆ.ಸಿ ರಂಗಾಪುರ ಸೇರಿದಂತೆ ಒಟ್ಟು 9 ಪರೀಕ್ಷಾ ಕೇಂದ್ರದಲ್ಲಿ ನಡೆಯಲಿದೆ.

ತಾಲೂಕಿನಲ್ಲಿ 181 ಪುನರಾರ್ವತಿತ ವಿದ್ಯಾರ್ಥಿ, 12 ಅಂಗವಿಕಲ ವಿದ್ಯಾರ್ಥಿಗಳಿದ್ದು, 5 ವಿದ್ಯಾರ್ಥಿಗಳಿಗೆ ಬದಲಿ ಅಭ್ಯರ್ಥಿಗಳ ಮೂಲಕ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ. ಇದೇ ವೇಳೆ ಗೈರುಹಾಜರಿ ಹಾಗೂ ಇತರೆ ಕಾರಣಗಳಿಂದ 178 ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾಗಿದ್ದಾರೆ ಎಂದು ತಿಳಿಸಿದರು.

ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸುದರ್ಶನ್, ಬಿಆರ್‌ಸಿ ಉಮೇಶ್‌ಗೌಡ, ಶಿಕ್ಷಣ ಸಂಯೋಜಕ ಹಾಗೂ ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಮಂಜುನಾಥ್ ಎಂ. ಮಧುಸೂದನ್ ಇನ್ನಿತರರು ಉಪಸ್ಥಿತರಿದ್ದರು.

# ವಿವಿಧ ಗ್ರಾಮಗಳಲ್ಲಿ ಸಿಸಿ ರಸ್ತೆ, ಚರಂಡಿ ಕಾಮಗಾರಿಗೆ ಭೂಮಿ ಪೂಜೆ

ತುಮಕೂರು: ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಸಬಾ ಹೋಬಳಿಯ ಬೆಳಗುಂಬ ಗ್ರಾಮ ಪಂಚಾಯ್ತಿಯ ವಡ್ಡರಹಳ್ಳಿ ಗ್ರಾಮದಲ್ಲಿ ತುಮಕೂರು ನಗರಾಭಿವೃದ್ಧಿ ವತಿಯಿಂದ ಸುಮಾರು 1 ಕೋಟಿ ಹಾಗೂ ಅರಕೆರೆ ಗ್ರಾಮ ಪಂಚಾಯ್ತಿಯ ಅರಕೆರೆ ಗ್ರಾಮದಲ್ಲಿ ಸುಮಾರು 76 ಲಕ್ಷ ರೂಗಳ ಅನುದಾನದಲ್ಲಿ ಸಿ ಸಿ ರಸ್ತೆ, ಚರಂಡಿ ಹಾಗೂ ಅರಕೆರೆ ಗ್ರಾಮ ಪಂಚಾಯ್ತಿಯ ತಿಮ್ಮಲಾಪುರ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಸುಮಾರು 1 ಕೋಟಿ ರೂಗಳ ಅನುದಾನದಲ್ಲಿ ಸಿ.ಸಿ. ರಸ್ತೆ ಕಾಮಗಾರಿಗೆ ಶಾಸಕ ಬಿ. ಸುರೇಶ್‌ಗೌಡರು ಶನಿವಾರ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ತುಮಕೂರು ನಗರ ಶಾಸಕ ಜಿ.ಬಿ. ಜ್ಯೋತಿ ಗಣೇಶ್, ಜಿಲ್ಲಾ ಬಿಜೆಪಿ ಯುವ ಮೋರ್ಚಾ ಮಾಜಿ ಅಧ್ಯಕ್ಷ ಅರಕೆರೆ ರವೀಶ್, ಟೂಡಾ ಮಾಜಿ ಸದಸ್ಯರಾದ ಜಗದೀಶ್, ತಾಲ್ಲೂಕು ಪಂಚಾಯ್ತಿ ಮಾಜಿ ಅಧ್ಯಕ್ಷ ಗಂಗಾಜಿನಯ್ಯ, ಹಿಂದುಳಿದ ವರ್ಗಗಳ ಗ್ರಾಮಾಂತರ ಅಧ್ಯಕ್ಷ ತಿಮ್ಮರಾಯಪ್ಪ, ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ ಚಿಕ್ಕರಂಗಯ್ಯ, ಮುಖಂಡರುಗಳಾದ ಬಸವರಾಜು, ರಾಜು ಅರಕೆರೆ ಗ್ರಾಮ ಪಂ ಮಾಜಿ ಅಧ್ಯಕ್ಷ ಸುನೀಲ್ ಪಟೇಲ್, ಶಿವಕುಮಾರ್, ಅರಕೆರೆ ಸಿದ್ದರಾಮಣ್ಣ, ಆರಿಫ್, ಕುಮಾರ್, ನಾಗೇಶ್, ನರಸಿಂಹ, ಕೃಷ್ಣಪ್ಪ ಅಲ್ಲದೆ ಬೆಳಗುಂಬ ಹಾಗೂ ಅರಕೆರೆ ಗ್ರಾಮ ಪಂಚಾಯ್ತಿಯ ಎಲ್ಲಾ ಮಾಜಿ ಸದಸ್ಯರುಗಳು ಮುಖಂಡರುಗಳು ಗ್ರಾಮಸ್ಥರು ತುಮಕೂರು ನಗರ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿ ಜಗದೀಶ್, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಾದ ಗೋವಿಂದರಾವ್, ಸಿದ್ದರಾಜು, ಗುತ್ತಿದಾರರಾದ ಪ್ರದೀಪ್, ರವೀಶ್, ನಟರಾಜ್ ಹಾಜರಿದ್ದರು.

## ಅಂತರ ಕಾಲೇಜು ಖೋ-ಖೋ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ



ಕೊರಟಗೆರೆ ;-ಅಂತರಕಾಲೇಜು ಮಹಿಳಾ ಖೋ-ಖೋ ಪಂದ್ಯಾವಳೀಯಲ್ಲಿ ಕೊರಟಗೆರೆ ಸರ್ಕಾರಿ ಪ್ರಥಮದರ್ಜೇಕಾಲೇಜು ವಿದ್ಯಾರ್ಥಿನಿಯರು ಭಾಗವಹಿಸಿ ದ್ವಿತೀಯ ಸ್ಥಾನ ಪಡೆದುಯಲ್ಲಿಕೊರಟಗೆರೆ ಸರ್ಕಾರಿಕಾಲೇಜಿಗೆಕೀರ್ತಿತಂದ ವಿದ್ಯಾರ್ಥಿಗಳನ್ನು ಕಾಲೇಜು ಪ್ರಾಂಶುಪಾಲ ಈರಪ್ಪನಾಯಕ ಹಾಗೂ ಸಿಬ್ಬಂದಿ ಅಭಿನಂದಿಸಿದ್ದಾರೆ.

ತುಮಕೂರು ಸರ್ಕಾರಿ ಪ್ರಥಮದರ್ಜೇ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿದ್ದ ಅಂತರಕಾಲೇಜು ಖೋ-ಖೋ ಪಂದ್ಯಾವಳಿನಯಲ್ಲಿ ಕೊರಟಗೆರೆ ಸರ್ಕಾರಿ ಪ್ರಥಮದರ್ಜೇಕಾಲೇಜಿನ ವಿದ್ಯಾರ್ಥಿನಿಯರಗಳು ಕೊರಟಗೆರೆತಾಲೂಕಿನ ಪರವಾಗಿ ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ ಪಡೆದುಕಾಲೇಜಿಗೆ ಮತ್ತುತಾಲೂಕಿಗೆಕೀರ್ತಿತಂದ ವಿದ್ಯಾರ್ಥಿಗಳನ್ನು ಕಾಲೇಜಿನ ಪ್ರಾಂಶುಪಾಲ ಈರಪ್ಪನಾಯಕ ಹಾಗೂ ಕಾಲೇಜಿನ ಸಿಬ್ಬಂದಿ ವಿಜೇತ ವಿದ್ಯಾರ್ಥಿಗಳಿಗೂ ಹಾಗೂ ಉತ್ತಮತರಬೇತಿ ನೀಡಿದಕಾಲೇಜಿನದೈಹಿಕ ಶಿಕ್ಷಣ ನಿರ್ದೇಶಕರಾದ ಸೌಭಾಗ್ಯರವರನ್ನು ಅಬಿನಂದಿಸಿದ್ದಾರೆ.

## "ವಚನ ವೈಭವ ನಾಟಕ ಪ್ರಯೋಗ"

ಮೇಳೇಹಳ್ಳಿಯ ಡಮರುಗ ರಂಗಸಂಪನ್ಮೂಲ ಕೇಂದ್ರವು ಕರ್ನಾಟಕ ಸರ್ಕಾರದ ಸಂಸ್ಕೃತಿ ಇಲಾಖೆಯ ಸಹಕಾರದೊಂದಿಗೆ ದಿನಾಂಕ 15-03-2026ನೇ ಭಾನುವಾತ ಮೇಳೇಹಳ್ಳಿಯ ವಿ.ರಾಮಮೂರ್ತಿ ರಂಗಸ್ಥಳದಲ್ಲಿ ಒಂದು ದಿನದ ಪ್ರಯೋಗ ಕಾರ್ಯಾಗಾರ ಮತ್ತು ವಚನ ವೈಭವ ನಾಟಕ ಪ್ರಯೋಗ ಆಯೋಜಿಸಲಾಗಿದೆ.

ಬೆಳಿಗ್ಗೆ 8 ರಿಂದ ಸಂಜೆನ5 ರವರೆಗೆ ಪ್ರಯೋಗ ಕಾರ್ಯಾಗಾರವಿದ್ದು ನಂತರ ದೇಸಿ ರಂಗನಿರ್ದೇಶಕ ಮೇಳೇಹಳ್ಳಿ ದೇವರಾಜ್ ನಿರ್ದೇಶನ ಹಾಗೂ ವಿದ್ವಾನ್ ಮುತ್ತುರಾಜ್ ಸಂಗೀತ ಸಂಯೋಜನೆಯಲ್ಲಿ ದಾವಣಗೆರೆ ರಂಗನೇಸರ ತಂಡದಿಂದ 'ವಚನ ವೈಭವ' ನಾಟಕ ಪ್ರಯೋಗಗೊಳ್ಳಲಿದೆ.ಪ್ರೇಕಕ ಗಣ್ಯರಾಗಿ ಹಿರಿಯ ಶರಣ ಸಂಸ್ಕೃತಿ ಪರಿಚಾರಕರಾದ ಪ್ರೊ. ಶಂಕರಗೌಡ ಮ ಬಿರಾದಾರ, ಹಿರಿಯ ಸಾಹಿತಿ ಮುದ್ದೇನಹಳ್ಳಿ ನಂಜಯ್ಯ, ಕೋರಾ ಹೋಬಳಿ ಕನ್ನಡ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷ ಕರೀಕೆರೆ ಪಾಲಾಕ್ಷ ಉಪಸ್ಥಿತರಿರುವರು. ರಂಗಾಸಕ್ತರು ಹೊಸ ಪ್ರಯೋಗಕ್ಕೆ ಪ್ರೋತ್ಸಾಹಿಸಿ ಯಶಸ್ವಿಗೊಳಿಸಲು ಕೋರಿಕೊಳ್ಳುತ್ತೇವೆ ಎಂದು ಡಮರುಗ ರಂಗಸಂಪನ್ಮೂಲ ಕೇಂದ್ರದ ಡಮರುಗ ಉಮೇಶ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರೊ.ಕುಮಾರ್ ಕೆ.ಎಸ್ ಸಿಂಡಿಕೇಟ್ ಸದಸ್ಯರಾಗಿ ನಾಮನಿರ್ದೇಶನ



ಮಧುಗಿರಿ: ಪಟ್ಟಣದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಕುಮಾರ್ ಕೆ.ಎಸ್ ರವರನ್ನು ಪ್ರಾಂಶುಪಾಲರ ಸೇವಾ ಜೇಷ್ಠತೆಯಲ್ಲಿ ಹಿರಿಯರ ಕೋಟಾದಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯ ಹಾಗೂ ವಿದ್ಯಾವಿಷಯಕ ಪರಿಷತ್ ನ ಸದಸ್ಯರಾಗಿ ತುಮಕೂರು ವಿಶ್ವವಿದ್ಯಾನಿಲಯದ ಕುಲಪತಿಗಳಿಂದ ನಾಮನಿರ್ದೇಶನ ಗೊಂಡಿದ್ದಾರೆ. ನಾಮನಿರ್ದೇಶನಗೊಂಡ ಪ್ರೊ.ಕುಮಾರ್ ಕೆ.ಎಸ್ ರವರಿಗೆ ಕಾಲೇಜು ಅಭಿವೃದ್ಧಿ ಸಮಿತಿ, ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### ಲೋನ್ ಕೊಡಿಸುವುದಾಗಿ ಹಣ ಪಡೆದು ವಂಚನೆ...

## ಆರೋಪಿ ಅರೆಸ್ಟ್



ತುಮಕೂರು ಜಿಲ್ಲೆ ತುರುವೇಕೆರೆ ತಾ. ಕಸಬಾ ಹೋ ಚೌಡೇನಹಳ್ಳಿ ಗ್ರಾಮದ ಶ್ರೀ ಆದಿಶಕ್ತಿ ಕೊಲ್ಲಾಪುರದಮ್ಮ ದೇವಾಲಯಕ್ಕೆ ಭಕ್ತನಾಗಿ ಬಂದು ದೇವಾಲಯದ ಸದಸ್ಯರುಗಳಿಗೆ ಪಿ.ಎಂ.ಈ.ಜಿ.ಪಿ ಯೋಜನೆಯಡಿಯಲ್ಲಿ 10 ಲಕ್ಷ ರೂ ಲೋನ್ (ಸಾಲ) ಕೊಡಿಸುವುದಾಗಿ ನಂಬಿಸಿ 07 ಜನರುಗಳಿಂದ ತಲಾ 25.000-00 ರೂ ಹಾಗೂ ಒಬ್ಬರಿಂದ 40.000-00 ರೂ ಒಟ್ಟು 2.15.000-00 ರೂ ಹಣವನ್ನು ಪಡೆದು ವಂಚನೆ ಮಾಡಿರುವುದಾಗಿ . 250/2025 : 318 (2) 314(4) 3/2 3(5) ಬಿ.ಎನ್.ಎಸ್ ರೀತ್ಯಾ ಪ್ರಕರಣ ದಾಖಲಾಗಿರುತ್ತೆ.

ಈ ಪ್ರಕರಣವನ್ನು ಪತ್ತೆ ಹಚ್ಚಲು ತುಮಕೂರು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಅಶೋಕ್.ಕೆ.ವಿ. ಐ.ಪಿ.ಎಸ್ ರವರ ಮಾರ್ಗದರ್ಶನದಲ್ಲಿ ಮತ್ತು ಹೆಚ್ಚುವರಿ ಪೊಲೀಸ್ ಅಧೀಕ್ಷಕರುಗಳಾದ ಸಿ.ಗೋಪಾಲ್ ಮತ್ತು ಪುರುಷೋತ್ತಮ. ಎಂ.ಎಲ್. ರವರ ನೇತೃತ್ವದಲ್ಲಿ, ಕುಣಿಗಲ್ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರಾದ ಓಂ ಪ್ರಕಾಶ್ ರವರ ಮಾರ್ಗಸೂಚನೆ ಮೇರೆಗೆ. ತುರುವೇಕೆರೆ ವೃತ್ತದ ಸರ್ಕಲ್ ಇನ್ಸ್‌ಪೆಕ್ಟರ್ ಆದ ಲೋಹಿತ್ ಬಿ.ಎನ್. ಪಿ.ಎಸ್.ಐ ಮೂರ್ತಿ ಟಿ. ತುರುವೇಕೆರೆ ಪೊಲೀಸ್ ಠಾಣೆ, ಹಾಗೂ ಸಿಬ್ಬಂದಿಗಳಾದ ಕಾನ್ಸೆಬಲ್ ನವೀನ್ ಡಿ.ವಿ ಮತ್ತು ರಾಜ್ ಕುಮಾರ್ ವಗೈರಿ, ರವರನ್ನು ಒಳಗೊಂಡ ಅಪರಾಧ ಪತ್ತೆ ತಂಡವನ್ನು ರಚಿಸಿದ್ದು, ಈ ಪ್ರಕರಣದಲ್ಲಿ ವಂಚನೆ ಮಾಡಿದ ಆರೋಪಿ ಸೋಮಶೇಖರ್ ಹೆಚ್ ಕೆ ಬಿನ್ ಲೇ ಕೃಷ್ಣಗೌಡ, ಆರೋಪಿಯನ್ನು ಬಂಧಿಸಲಾಗಿರುತ್ತದೆ.

**ಆರೋಪಿಯ ವಿವರ :**

ಸೋಮಶೇಖರ್ ಹೆಚ್ ಕೆ ಬಿನ್ ಲೇ ಕೃಷ್ಣಗೌಡ, 46ವರ್ಷ, ರಿಯಲ್ ಎಸ್ಟೇಟ್ ವ್ಯಾಪಾರ. ಹುಲ್ಲೇನಹಳ್ಳಿ ಬಾಗೂರು ಹೋ ಚನ್ನರಾಯಪಟ್ಟಣ ತಾ. ಹಾಸನ ಜಿಲ್ಲೆ ಹಾಲಿ ವಾಸ: ಹೊಯ್ಸಳ ನಗರ ಹುಲಿಯೂರಮ್ಮ ದೇವಸ್ಥಾನದ ಸಮೀಪ. ಸುಂಕದಕಟ್ಟೆ, ಬೆಂಗಳೂರು. ಬಂಧನ ಮಾಡುವಲ್ಲಿ ಯಶಸ್ವಿಯಾದ ಸದರಿ ಪತ್ತೆತಂಡವನ್ನು ಮಾನ್ಯ ಪೊಲೀಸ್ ಅಧೀಕ್ಷಕರಾದ ಕೆ.ವಿ.ಅಶೋಕ್, ಐ.ಪಿ.ಎಸ್ ರವರು ಪ್ರಶಂಸಿರುತ್ತಾರೆ.

# ಕಿವುಡರ ಕ್ರೀಡಾ ಒಕ್ಕೂಟದ ಬೆಳ್ಳಿ ಮಹೋತ್ಸವ; ಸಾಧಕರಿಗೆ ಸನ್ಮಾನ

ಮೌನ ಕ್ರಾಂತಿ ನ್ಯೂಸ್




ತುಮಕೂರು: ವಿಕಲಚೇತನರು ದೇವರ ಮಕ್ಕಳು, ಕಾರಣಾಂತರದಿಂದ ಅವರು ಅಂಗವೈಕಲ್ಯದಿಂದ ಜನಿಸಿರಬಹುದು, ಅವರನ್ನು ಚೆನ್ನಾಗಿ ನೋಡಿಕೊಳ್ಳುವ ಜವಾಬ್ದಾರಿ ಸಮಾಜದ ಎಲ್ಲರ ಮೇಲೂ ಇದೆ ಎಂದು ಶಾಸಕ ಜಿ.ಬಿ. ಜ್ಯೋತಿಗಣೇಶ್ ಹೇಳಿದರು.

ಶನಿವಾರ ನಗರದ ಸಿದ್ಧಿವಿನಾಯಕ ಸಮುದಾಯ ಭವನದಲ್ಲಿ ರಾಜ್ಯ ಕಿವುಡರ ಕ್ರೀಡಾ ಒಕ್ಕೂಟ ಏರ್ಪಡಿಸಿದ್ದ ಒಕ್ಕೂಟದ ಬೆಳ್ಳಿ ಮಹೋತ್ಸವ ಆಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಶಾಸಕರು, ವಿಕಲಚೇತನರ ಕಲ್ಯಾಣಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿವೆ. ಅವುಗಳ ಸದ್ಬಳಕೆ ಮಾಡಿಕೊಳ್ಳಲು ಪ್ರೋತ್ಸಾಹಿಸಬೇಕು. ವಿಕಲಚೇತನರನ್ನು ಎಲ್ಲರ ಜೊತೆ ಸಮಾಜದ ಮುಖ್ಯವಾಹಿನಿಗೆ ಕರೆತರಲು ಎಲ್ಲರೂ ಕಾಳಜಿವಹಿಸಬೇಕು ಎಂದರು.ವಿಕಲಚೇತನರು ಗೌರವದಿಂದ, ಸ್ವಾಭಿಮಾನದಿಂದ ಬದುಕುವಂತಹ ವಾತಾವರಣ ನಿರ್ಮಾಣ ಮಾಡಬೇಕು, ಬೇಧಭಾವ ಮಾಡದೆ ಅವರು ನೆಮ್ಮದಿಯಾಗಿ ಬಾಳಲು ನೈತಿಕ ಬೆಂಬಲ ನೀಡಬೇಕು ಎಂದು ಶಾಸಕರು ಹೇಳಿದರು.

ಸಾಧನೆ ಮಾಡಿದ ಕಿವುಡ ಕ್ರೀಡಾಪಟುಗಳನ್ನು ಸನ್ಮಾನಿಸಿ ಮಾತನಾಡಿದ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್, ಅಂಗವೈಕಲ್ಯದ ನಡುವೆಯೂ ಕ್ರೀಡೆಯಲ್ಲಿ ಸಾಧನೆ ಮಾಡಿರುವ ನಿಮ್ಮ ಸಾಧನೆ ನಮಗೆ ಪ್ರೇರಣೆಯಾಗುತ್ತದೆ. ನಾವೂ ಏನನ್ನಾದರೂ ಸಾಧಿಸಲು ಮತ್ತಷ್ಟು ಹುರುಪು ಬರುತ್ತದೆ. ನಿಮ್ಮ ಬಗ್ಗೆ ನಮಗೆ ಹೆಮ್ಮೆ ಇದೆ ಎಂದು ಹೇಳಿದರು.

ನಗರದಲ್ಲಿ ಉದ್ಯೋಗ ಹಬ್ಬವಿಕಲಚೇತನರಿಗೆ ಉದ್ಯೋಗಾವಕಾಶ ಕಲ್ಪಿಸಬೇಕು ಎನ್ನುವ ಕಾರಣಕ್ಕೆ ನಗರದಲ್ಲಿ ಉದ್ಯೋಗ ಹಬ್ಬ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ. ಆಸಕ್ತ, ಅರ್ಹ ವಿಕಲಚೇತನರು ಇದರ ಪ್ರಯೋಜನ ಪಡೆದು ಉದ್ಯೋಗ ಪಡೆಯಬಹುದು ಎಂದು ಶುಭಾ ಕಲ್ಯಾಣ್ ಹೇಳಿದರು.

ಟಿಎಂಸಿಸಿ ಬ್ಯಾಂಕ್ ಅಧ್ಯಕ್ಷ ಡಾ.ಎನ್.ಎಸ್. ಜಯಕುಮಾರ್ ಮಾತನಾಡಿ, ವಿಕಲಚೇತನರ ಜೊತೆ ನಾವಿದ್ದೇವೆ. ಅವರು ಕೀಳರಿಮೆ ಬಿಟ್ಟು ಸಾಧನೆಯತ್ತ ಗಮನ ಕೊಡಲಿ ಎಂದ ಅವರು, ಈ ಸಂಸ್ಥೆಯ ಜಿಲ್ಲಾ ಘಟಕಕ್ಕೆ ತಮ್ಮ ಸಂಸ್ಥೆಯಿಂದ 3 ಲಕ್ಷ ರೂ. ದೇಣಿಗೆ ನೀಡುವುದಾಗಿ ಪ್ರಕಟಿಸಿದರು.

ಈ ವೇಳೆ ರಾಷ್ಟ್ರೀಯ, ರಾಜ್ಯಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಿ ಸಾಧನೆ ಮಾಡಿದ ಕಿವುಡ ಕ್ರೀಡಾಪಟುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಭಾರತೀಯ ಕಿವುಡರ ಕ್ರೀಡಾ ಮಂಡಳಿ ಅಧ್ಯಕ್ಷ ವಿ.ಕುಮಾರ್, ಆಡಳಿತ ಮಂಡಳಿ ಸದಸ್ಯೆ ಶೋಭಾ ಗಣೇಶನ್, ರಾಜ್ಯ ಕಿವುಡರ ಸಂಘದ ಅಧ್ಯಕ್ಷ ಸುನಿಲ ಎಂ. ಕಂದೂರ, ಉಪಾಧ್ಯಕ್ಷ ಕಾಡಪ್ಪ ಬಿ. ಗುಡದಿನ್ನಿ, ಕಾರ್ಯದರ್ಶಿ ಜಿ.ಎಸ್. ನವೀನ್‌ಕುಮಾರ್, ಜಿಲ್ಲಾ ಕಿವುಡರ ಸಂಘದ ಕಾರ್ಯದರ್ಶಿ ಹೆಚ್.ಎಂ. ರವೀಶ್, ಸಲಹೆಗಾರರಾದ ಗಾಯತ್ರಿ ರವೀಶ್, ವಿವಿಧ ಘಟಕಗಳ ಮುಖಂಡರಾದ ಟಿ.ವಿ. ಮನೋಹರ್, ಜೆ.ವಿ.ಮಹೇಶ್ ಶರ್ಮಾ, ಎಂ.ಜಿ. ನಾಗೇಂದ್ರನ್, ಕೆ.ಎಸ್.ಉಮಾಶಂಕರ್, ಎಸ್.ಎಸ್. ದೇವರಾಜು ಮೊದಲಾದವರು ಭಾಗವಹಿಸಿದ್ದರು.

# ಗಣಿತಶಾಸ್ತ್ರದಲ್ಲಿ ಶಿಸ್ತು ಮತ್ತು ಶಿಕ್ಷಣಶಾಸ್ತ್ರವನ್ನು ಅರ್ಥಮಾಡಿಕೊಳ್ಳುವುದು'

ಮೌನ ಕ್ರಾಂತಿ ನ್ಯೂಸ್




ತುಮಕೂರು: ಡಾ.ರಾಜಣ್ಣನವರು ಈ ಪುಸ್ತಕಗಳಲ್ಲಿ ಗಣಿತವನ್ನು ಒಂದು ವಿಷಯವಾಗಿ ಮತ್ತು ಒಂದು ಶಿಕ್ಷಣ ಅಭ್ಯಾಸವಾಗಿ ನೋಡಿದ್ದಾರೆ. ಇವೆರಡನ್ನೂ ಒಂದೇ ಪುಸ್ತಕದಲ್ಲಿ ತರುವುದು ಬಹಳ ವಿಶಿಷ್ಟವಾಗಿದೆ. ಇದು ಶಿಕ್ಷಕರಿಗೆ ಮತ್ತು ಮಹತ್ವಾಕಾಂಕ್ಷಿ ಶಿಕ್ಷಕರಿಗೆ ಸಮಗ್ರ ಜ್ಞಾನವನ್ನು ನೀಡುತ್ತದೆ ಎಂದು ಚಾಣಕ್ಯ ವಿಶ್ವವಿದ್ಯಾನಿಲಯದ ಶೈಕ್ಷಣಿಕ ವಿಭಾಗದ ನಿರ್ದೇಶಕರಾದ ಡಾ. ಪದ್ಮಾವತಿ ಹೇಳಿದರು.

ನಗರದ ಕನ್ನಡ ಭವನದಲ್ಲಿ ಆಕಾಶಗಂಗಾ ಚಾರಿಟಬಲ್ ಟ್ರಸ್ಟ್ (ರಿ),ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮತ್ತು ಕೆ.ಎಸ್.ಇ.ಎಫ್ ಶಿಕ್ಷಣ ಮಹಾವಿದ್ಯಾಲಯ ಸಹಯೋಗದಲ್ಲಿ ಆಯೋಜಿಸಿದ್ದ ಡಾ.ರಾಜಣ್ಣ ಎಸ್. ಪಿ ಅವರ ಸೂಕ್ಷ್ಮ ಬೋಧನಾ ಕೌಶಲ್ಯಗಳು & ಶಿಕ್ಷಕ ತರಬೇತಿ ತಿಳುವಳಿಕೆ ಶಿಸ್ತು ಮತ್ತು ಶಿಕ್ಷಣಶಾಸ್ತ್ರ ಗಣಿತ ಕೃತಿಗಳ ಜನರ್ಪಣಾ ಕಾರ್ಯಕ್ರಮದಲ್ಲಿ ಮಾತನಾಡಿ, ಗಣಿತಶಾಸ್ತ್ರದಲ್ಲಿ ಶಿಸ್ತು ಮತ್ತು ಶಿಕ್ಷಣಶಾಸ್ತ್ರವನ್ನು ಅರ್ಥಮಾಡಿಕೊಳ್ಳುವುದು' - ಇದು ನನಗೂ ಸ್ವಲ್ಪ ಜಟಿಲವಾಗಿದೆ. ಏಕೆಂದರೆ ಗಣಿತದ ಭಯ. ಈ ಗಣಿತದ ಭಯ ನಮ್ಮೆಲ್ಲರಲ್ಲೂ ಇದೆ. ವಿಶೇಷವಾಗಿ ತರಗತಿಗಳಲ್ಲಿ ಸಂಖ್ಯೆಗಳು ನಮಗೆ ತುಂಬಾ ಜಟಿಲವಾಗಿವೆ ಎಂದು ಭಾವಿಸಿದರೆ, ಉಳಿದವುಗಳು ನಮ್ಮ ಜೀವನದಲ್ಲಿ ಆ ಗಣಿತದ ಭಯದಲ್ಲಿ ಬದುಕುತ್ತಿದ್ದೇವೆ,ಈ ಪುಸ್ತಕದೊಂದಿಗೆ ಬಹುಶಃ ಈ ಗಣಿತದ ಭಯವನ್ನು ಪರಿಹರಿಸಲು ಪ್ರಯತ್ನಿಸಿರಬಹುದು. ಗಣಿತವು ನಮಗೆ ಭಯವಾಗಲು ಕಾರಣ, ವಿಶೇಷವಾಗಿ, ಗಣಿತವು ಅಮೂರ್ತ ವಿಷಯವಾಗಿದೆ. ಇದು ಯಾವುದೇ ಇತರ ವಿಷಯದಂತೆ ನಮಗೆ ಸುಲಭವಾಗಿ ಮತ್ತು ಅರ್ಥವಾಗುವಂತೆ ಬರುವ ವಿಷಯವಲ್ಲ. ಗಣಿತವು ಇನ್ನೂ ಕಷ್ಟಕರವಾಗಿರುವುದು ಏಕೆ ನಾವು ಅನುಸರಿಸುವ ಶಿಕ್ಷಣಶಾಸ್ತ್ರ. ತರಗತಿಗಳಿಂದ ನಮ್ಮ ಶಾಲಾ ಶಿಕ್ಷಣದಲ್ಲಿ ಗಣಿತ ಶಿಕ್ಷಣವನ್ನು ಹೇಗೆ ಮಾಡಲಾಗಿದೆ, ನಮ್ಮಲ್ಲಿ ಭಯವನ್ನು ನಿಭಾಯಿಸುವ ಬದಲು, ಅದನ್ನು ಎದುರಿಸುವ ಬದಲು, ಅದನ್ನು ಹೆಚ್ಚಿಸುವ ಶಿಕ್ಷಣಶಾಸ್ತ್ರವನ್ನು ನಾವು ಅನುಸರಿಸುತ್ತಿದ್ದೇವೆ. ವಿಶೇಷವಾಗಿ ಅದು ವಯಸ್ಸಿಗೆ ಸೂಕ್ತವಾದ ಶಿಕ್ಷಣಶಾಸ್ತ್ರವಲ್ಲದಿದ್ದರೆ, ಗಣಿತ ಇನ್ನಷ್ಟು ಕಷ್ಟಕರವಾಗುತ್ತದೆ. ಆದ್ದರಿಂದ ಈ ವಿಷಯದಲ್ಲಿ, 'ಗಣಿತದಲ್ಲಿ ಶಿಸ್ತು ಮತ್ತು ಶಿಕ್ಷಣಶಾಸ್ತ್ರವನ್ನು ಅರ್ಥಮಾಡಿಕೊಳ್ಳುವುದು' ಎಂಬ ಪುಸ್ತಕವು ತನ್ನ ಪುಸ್ತಕದಲ್ಲಿ ಗಣಿತದ ವಿಷಯವನ್ನು ಹೇಗೆ ಅರ್ಥಮಾಡಿಕೊಳ್ಳಬೇಕು, ಅದಕ್ಕೂ ಮೊದಲು ಅವರು ಸೈದ್ಧಾಂತಿಕ ಪರಿಕಲ್ಪನೆಗಳೊಂದಿಗೆ ವ್ಯವಹರಿಸುವ ಶುದ್ಧ ಗಣಿತದ ನಡುವಿನ ವ್ಯತ್ಯಾಸವೇನು ಎಂದು ತಿಳಿಸಿದ್ದಾರೆ. ಹಲವು ಶಾಲಾ ಮಕ್ಕಳು ಪೈಥಾಗರಸ್ ಪ್ರಮೇಯ, ಇತರ ಕೆಲವು ಗಣಿತ ಸಿದ್ಧಾಂತ, ತ್ರಿಕೋನಮಿತಿ, ರೇಖಾಗಣಿತವನ್ನು ಏಕೆ ಕಲಿಸುತ್ತಿದ್ದಾರೆಂದು ಸಮರ್ಥಿಸಿಕೊಂಡರೆ, ಗಣಿತವನ್ನು ಕಲಿಯುವುದು ಬಹುಶಃ ಸುಲಭವಾಗುತ್ತದೆ, ಇದನ್ನು ಈ ಪುಸ್ತಕದಲ್ಲಿ ಚೆನ್ನಾಗಿ ವಿವರಿಸಿದ್ದಾರೆ. ಈ ಪುಸ್ತಕದಲ್ಲಿ ಬರುವ ಇನ್ನೊಂದು ವಿಷಯವೆಂದರೆ ಗಣಿತವು ಇತರ ವಿಷಯಗಳೊಂದಿಗೆ ಹೇಗೆ ಪರಸ್ಪರ ಸಂಬಂಧ ಹೊಂದಿದೆ. ಗಣಿತವನ್ನು ಹಂತ ಹಂತವಾಗಿ ಹೇಗೆ ಕಲಿಸಬೇಕು, ಶಿಕ್ಷಣ ವಿಧಾನಗಳು ಯಾವುವು ಎಂಬುದನ್ನು ಚೆನ್ನಾಗಿ ತಿಳಿಸಿದ್ದಾರೆ ಎಂದು ಹೇಳಿದರು.

ಕೆ. ಎಸ್. ಎಸ್. ಕಾಲೇಜಿನ ಪ್ರಾಂಶುಪಾಲರಾದ ಡಾ. ಹರೀಶ್ ಮಾತನಾಡಿ,ಕನ್ನಡ ಸಾಹಿತ್ಯದಲ್ಲಿ ಹಲವಾರು ಹೆಚ್ಚು ಜನರು ಬಗ್ಗೆ ಆಸಕ್ತಿಗಳನ್ನ ತೋರಿಸ್ತಾ, ವ್ಯಕ್ತಿತ್ವ ವನ್ನು ಜಿಲ್ಲಾ ಮಟ್ಟದಲ್ಲಿ, ರಾಜ್ಯ ಮಟ್ಟದಲ್ಲಿ, ರಾಷ್ಟ್ರ ಮಟ್ಟದಲ್ಲಿ ಬೆಳೆಸಿಕೊಳ್ಳುತ್ತಾರೆ, ಆದರೆ ಶಿಕ್ಷಕರ ಶಿಕ್ಷಣ ಕಡೆ ಹೆಚ್ಚು ಜನ ಗಮನ ಹರಿಸುವುದಿಲ್ಲ, ಶಿಕ್ಷಕರ ಶಿಕ್ಷಣ ಅಂತಕ್ಕಂತದ್ದು ತುಂಬಾ ಅತ್ಯಮೂಲ್ಯವಾದದ್ದು. ಮಾನಸಿಕವಾಗಿ, ದೈಹಿಕವಾಗಿ, ಶಾರೀರಿಕವಾಗಿ, ಯಾವ ರೀತಿ ಬೋಧನಾ ವಿಧಾನಗಳನ್ನ, ಚಟುವಟಿಕೆಗಳನ್ನ ಶಿಕ್ಷಕರ ಶಿಕ್ಷಣದಲ್ಲಿ ಹೆಚ್ಚಿನ ಮಹತ್ವವನ್ನ ಕಾಣಬಹುದು. ಡಾ. ಎಸ್.ಪಿ. ರಾಜಣ್ಣನವರು ಬರೆದ ಈ ಎರಡು ಪುಸ್ತಕಗಳು ಪಠ್ಯಕ್ರಮ ಆಧಾರಿತ ವಿಷಯಗಳ ಕುರಿತು ಪ್ರಕಟವಾದ ಕೆಲವೇ ಪುಸ್ತಕಗಳಲ್ಲಿ ಸೇರಿವೆ,ನಿರ್ದಿಷ್ಟವಾಗಿ ಅವರು ಶಿಕ್ಷಕರ ಶಿಕ್ಷಣಕ್ಕೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡುತ್ತಾರೆ ಎಂದು ಹೇಳಿದರು.

# ಸಮಾಜದಲ್ಲಿ ಆರೋಗ್ಯಕರ ಜೀವನ ನಿರ್ಮಾಣವಾಗಲು ವೈದ್ಯರ ಸೇವೆ ಅತ್ಯಗತ್ಯ.

ಮೌನ ಕ್ರಾಂತಿ ನ್ಯೂಸ್



ಮಧುಗಿರಿ : ಮಾನವ ಜೀವನದಲ್ಲಿ ವೈದ್ಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ರೋಗದಿಂದ ಬಳಲುತ್ತಿರುವ ಜನರನ್ನು ಗುಣಪಡಿಸುವ ಮೂಲಕ ಅವರ ಜೀವನಕ್ಕೆ ಹೊಸ ಆಶೆಯನ್ನು ನೀಡುತ್ತಿದ್ದಾರೆ ಎಂದು ಪಾವಗಡದ ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಅಧ್ಯಕ್ಷ ಜಪಾನಂದಾ ಮಹರಾಜ್ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ರಸ್ತೆಯಲ್ಲಿರುವ ಶ್ರೀ ಸಿದ್ಧಗಂಗಾ ಹಾಸ್ಪಿಟಲ್ ಡಯಾಲಿಸಿಸ್ ಸೆಂಟರ್ , ಪಾವಗಡದ ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ , ಬೆಂಗಳೂರಿನ ಡಾ.ಎಸ್.ಆರ್.ಚಂದ್ರಶೇಖರ್ ವಾಕ್ ಮತ್ತು ಶ್ರವಣ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಬೃಹತ್ ಆರೋಗ್ಯ ತಪಾಸಣಾ ಶಿಬಿರ , ಹೃದ್ರೋಗ ತಪಾಸಣಾ ಶಿಬಿರ ಹಾಗೂ ಶ್ರವಣ ದೋಷವುಳ್ಳ ಬಡವರಿಗೆ ಉಚಿತವಾಗಿ ಶ್ರವಣ ಸಾಧನವನ್ನು ವಿತರಣೆ ಮಾಡುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದಲ್ಲಿ ಆರೋಗ್ಯಕರ ಜೀವನ ನಿರ್ಮಾಣವಾಗಲು ವೈದ್ಯರ ಸೇವೆ ಅತ್ಯಗತ್ಯ. ಆಸ್ಪತ್ರೆಗಳಲ್ಲಿ ಮಾತ್ರವಲ್ಲದೇ ಗ್ರಾಮೀಣ ಪ್ರದೇಶಗಳಲ್ಲಿಯೂ ವೈದ್ಯರು ಜನರಿಗೆ ಸೇವೆ ಸಲ್ಲಿಸುತ್ತಿದ್ದಾರೆ. ಗ್ರಾಮೀಣ ಭಾಗದಲ್ಲಿ ನಡೆಯುವ ಆರೋಗ್ಯ ಶಿಬಿರಗಳಿಂದ ಬಡವರು ಹಾಗೂ ರೋಗಿಗಳಿಗೆ ಸಾಕಷ್ಟು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಗ್ರಾಮೀಣ ಭಾಗದ ಆರೋಗ್ಯ ಶಿಬಿರದಲ್ಲಿ ಉತ್ತಮವಾದ ವೈದ್ಯರುಗಳು ಆಗಮಿಸುತ್ತಾರೆ. ಅವರಿಂದಲೇ ತಮ್ಮ ಆರೋಗ್ಯವನ್ನು ತಪಾಸಣೆ ಮಾಡಿಸಿಕೊಂಡು ಸಲಹೆಗಳನ್ನು ಪಡೆಯಬೇಕೆಂದು ತಿಳಿಸಿದರು.

ಪಟ್ಟಣದ ಸಿದ್ದಗಂಗಾ ಡಯಾಲಿಸಿಸ್ ಕೇಂದ್ರದಲ್ಲಿ 1500 ಡಯಾಲಿಸಿಸ್ ಪೂರ್ಣಗೊಂಡಿರುವುದು ಸಂತಸ ತಂದಿದೆ. ಈ ಕೇಂದ್ರದಲ್ಲಿ ಕಣ್ಣಿನ ತಪಾಸಣೆ , ಚರ್ಮರೋಗ ತಪಾಸಣೆ ಹಾಗೂ ಡಯಾಲಿಸಿಸ್ ನಿರಂತರವಾಗಿ ನಡೆಯುತ್ತಿದೆ ಎಂದು ತಿಳಿಸಿ, ಮತ್ತಷ್ಟು ಸ್ಥಳ ದೊರೆತರೆ ಉಚಿತವಾಗಿ ತಪಾಸಣೆ ಹಾಗೂ ಚಿಕಿತ್ಸೆ ನೀಡಲು ನಾನು ಬದ್ದನಾಗಿದ್ದೇನೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷೆ ಸಹನಾ, ಸಿದ್ಧಗಂಗಾ ಹಾಸ್ಪಿಟಲ್ ಡಯಾಲಿಸಿಸ್ ಸೆಂಟರ್ ಕೇಂದ್ರದ ಅನುರಾಧ, ಅಕ್ಷಯ್ , ಮಹಿಳಾ ಸಮಾಜದ ಗೌರವಾಧ್ಯಕ್ಷೆ ಪುಷ್ಪಾವತಮ್ಮ, ವೈದ್ಯರಾದ ಅರುಣ್, ಶರತ್ , ನಟರಾಜ್, ಶ್ರೀನಿವಾಸ್, ಸ್ವಾತಿ , ಅಭಿಷೇಕ, ಸಿದ್ದಗಂಗಾ ಮೆಡಿಕಲ್ ಕಾಲೇಜಿನ ಎಂ.ಎನ್. ಸಂಜೀವ್ ಕುಮಾರ್ , ಇನ್ಫೋಸಿಸ್

ಕರ್ನಾಟಕ ಮಾಧ್ಯಮ ಅಕಾಡೆಮಿ ಸಂಶೋಧನಾ ಪೆಲೋಶೀಪ್‌ಗೆ

## ಎಸ್.ಹರೀಶ್ ಆಚಾರ್ಯ ವರದಿ ಆಯ್ಕೆ

ಸೂರ್ಯಪ್ರಗತಿ ನ್ಯೂಸ್.ಕಾಂ



ತುಮಕೂರು: ಹಿರಿಯ ವರದಿಗಾರ ಎಸ್. ಹರೀಶ್ ಆಚಾರ್ಯ ಅವರು ಕರ್ನಾಟಕ ಮಾಧ್ಯಮ ಅಕಾಡೆಮಿ ಸಂಶೋಧನಾ ಫೆಲೋಶಿಪ್ ಯೋಜನೆಯಡಿ ರೂಪಿಸಿದ್ದ ಕೃಷಿ ಸಂವಹನ ಒಂದು ಅಧ್ಯಯನ ಎಂಬ ಸಂಶೋಧನಾ ವರದಿಯನ್ನ ಕರ್ನಾಟಕ ಸರಕಾರದ ಮುಖ್ಯಮಂತ್ರಿ ಸಿದ್ಧರಾಮಯ್ಯ ಬಿಡುಗಡೆ ಮಾಡಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಶುಕ್ರವಾರ ಸಂಜೆ ವರದಿಯನ್ನು ಶಾಸಕ ರಿಜ್ವಾನ್ ಹರ್ಷದ್, ಅಕಾಡೆಮಿಯ ಅಧ್ಯಕ್ಷೆ ಆಯಿಷಾಖಾನಂ, ಸಾಹಿತಿ ಹಂಪ ನಾಗರಾಜಯ್ಯ ಅವರ ಸಮ್ಮುಖದಲ್ಲಿ ಬಿಡುಗಡೆ ಮಾಡಿದರು.

ಎಸ್ ಹರೀಶ್ ಆಚಾರ್ಯ ಅವರು, ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದು,2004ರಲ್ಲಿ ತುಮಕೂರು ವಾರ್ತೆ ದಿನಪತ್ರಿಕೆ ಯಿಂದ ವೃತ್ತಿ ಜೀವನ ಆರಂಭಿಸಿ ಕನ್ನಡಪ್ರಭ, ಈ ಟಿವಿ ಕನ್ನಡ, ವಿಜಯ ಕರ್ನಾಟಕದಲ್ಲಿ ಜಿಲ್ಲಾ ವರದಿಗಾರ, ಉಪ ಸಂಪಾದಕರಾಗಿ, ಉತ್ತಮ ಬರಹಗಾರರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ರಾಜ್ಯಮಟ್ಟದ ದಿನ ಪತ್ರಿಕೆಯಾದ ಪ್ರಜಾಪ್ರಗತಿ ದಿನ ಪತ್ರಿಕೆ ತುಮಕೂರು ಆವೃತ್ತಿಯಲ್ಲಿ ಮುಖ್ಯ ವರದಿಗಾರರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಕೃಷಿ ಸಂವಹನದ ಬಗ್ಗೆ ಆಸಕ್ತಿ ಉಳ್ಳವರಾಗಿ , ಕರ್ನಾಟಕ ಮಾಧ್ಯಮ ಅಕಾಡೆಮಿ ಸಂಶೋಧನಾ ಪೆಲೋಶೀಪ್ ಯೋಜನೆಗೆ 2025-26ನೇ ಸಾಲಿಗೆ ಆಯ್ಕೆ ಯಾಗಿ ಕೃಷಿ ಸಂವಹನ ಒಂದು ಅಧ್ಯಯನ ಎಂಬ ವರದಿಯನ್ನು ರಚಿಸಿರುವುದು ಜಿಲ್ಲೆಯ ಪತ್ರಿಕೋದ್ಯಮಕ್ಕೆ ಹಾಗೂ ಕೃಷಿ ವಲಯಕ್ಕೆ ಅಪಾರವಾದ ಕೊಡುಗೆ ನೀಡಿದಂತಾಗಿದೆ.

# ವರದಕ್ಷಿಣೆ ವಿರೋಧಿ ವೇದಿಕೆಯಿಂದ ಮಹಿಳಾ ದಿನಾಚರಣೆ: ದೌರ್ಜನ್ಯರಹಿತ ಸಮಾಜ ನಿರ್ಮಾಣಕ್ಕೆ ಕರೆ

ಮೌನ ಕ್ರಾಂತಿ ನ್ಯೂಸ್



ತುಮಕೂರು: ಯಾವ ಕುಟುಂಬದಲ್ಲಿ ಮಹಿಳೆ ನೆಮ್ಮದಿಯಾಗಿ ಇರುವಳೋ ಅಂತಹ ಕುಟುಂಬಗಳು ಸಮೃದ್ಧಿ ಹೊಂದುತ್ತವೆ. ಇಂತಹ ಪ್ರೀತಿಯ ಹುಡುಕಾಟದಲ್ಲಿಯೇ ದೌರ್ಜನ್ಯ ರಹಿತ ಸಮಾಜ ನಿರ್ಮಾಣ ಮಾಡಬೇಕಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಡಾ.ಎಸ್.ಸಿದ್ದರಾಮಣ್ಣ ಕರೆ ನೀಡಿದರು.

ವರದಕ್ಷಿಣೆ ವಿರೋಧಿ ವೇದಿಕೆ, ಸಾಂತ್ವನ ಕೇಂದ್ರ, ಕರ್ನಾಟಕ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಕನ್ನಡ ಭವನದಲ್ಲಿ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆ-ಸಾಧಕಿಯರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, 1911 ರಿಂದಲೂ ಮಹಿಳಾ ಹೋರಾಟಗಳು ನಡೆದುಕೊಂಡು ಬಂದಿವೆ. ವಿಶ್ವ ಮಹಿಳಾ ದಿನಾಚರಣೆಗೆ ತನ್ನದೇ ಆದ ಐತಿಹಾಸಿಕ ಮಹತ್ವವಿದೆ. ಇತಿಹಾಸವನ್ನು ಅರಿಯುತ್ತಲೇ ನಮ್ಮ ಸಮಾಜವನ್ನು ಉತ್ತಮ ಸ್ಥಿತಿಯಲ್ಲಿಡಲು ನಾವೆಲ್ಲ ಶ್ರಮಿಸಬೇಕು. ಅಸಮಾನತೆ ಹಳಿಯಬೇಕು. ದೌರ್ಜನ್ಯ ರಹಿತ ಸಮಾಜ ನಿರ್ಮಾಣವಾಗಬೇಕು. ತಾರತಮ್ಯ ನಿವಾರಣೆಯಾಗಿ ಸಮಾನತೆಯ ಸಮಾಜ ನಿರ್ಮಾಣವಾಗಬೇಕು. ಇದಕ್ಕಾಗಿ ಇಂತಹ ಸಮಾರಂಭಗಳು ಅತ್ಯವಶ್ಯಕ ಎಂದರು.

ಅಧ್ಯಕ್ಷೀಯ ನುಡಿಗಳನ್ನಾಡಿದ ಲೇಖಕಿ, ವರದಕ್ಷಿಣೆ ವಿರೋಧಿ ವೇದಿಕೆ ಅಧ್ಯಕ್ಷೆ ಎಂ.ಸಿ.ಲಲಿತ ಮಾತನಾಡಿ ಆಧುನಿಕತೆ ಬೆಳೆದಂತೆ ದೌರ್ಜನ್ಯದ ಸ್ವರೂಪಗಳೂ ಬದಲಾಗುತ್ತಿವೆ. ಸಮಾನತೆ ಎಂಬುದು ಗ್ರಾಮಾಂತರ ಪ್ರದೇಶಗಳಲ್ಲಿ ಇಂದಿಗೂ ಸಾಧ್ಯವಾಗಿಲ್ಲ. ದುಡಿಯುವ ಮಹಿಳೆಯರಂತೂ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಕುಟುಂಬದ ಒಳಗೆ ಮತ್ತು ಹೊರಗೆ ಎರಡೂ ಕಡೆ ತನಗಾಗುವ ಕಷ್ಟಕಾರ್ಪಣ್ಯಗಳನ್ನು ಸಹಿಸಿಕೊಂಡೇ ಬದುಕು ಸಾಗಿಸುತ್ತಿದ್ದಾಳೆ. ಇಂತಹ ಸಂದರ್ಭದಲ್ಲಿ ಪ್ರೀತಿ, ಸಹನೆಯ ಮಾತುಗಳು ಮುಖ್ಯವಾಗುತ್ತವೆ. ಅಂತಹ ವಾತಾವರಣ ನಿರ್ಮಾಣವಾಗಲಿ ಎಂದು ಆಶಿಸಿದರು.

ಆಶಯ ನುಡಿಗಳನ್ನಾಡಿದ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಬಾ.ಹ. ರಮಾಕುಮಾರಿ ಹೋರಾಟಗಳು ಮತ್ತು ಪ್ರಶಸ್ತಿಗಳು ಅರ್ಥ ಕಳೆದುಕೊಳ್ಳುತ್ತಿರುವ ಈ ದಿನಮಾನಗಳಲ್ಲಿ ಪ್ರಶಸ್ತಿಗಾಗಿ ಅರ್ಹರನ್ನು ಹುಡುಕುವುದೇ ಕಷ್ಟವಾಗಿದೆ. ನಿರಂತರವಾಗಿ ಸಮಾಜಮುಖಿಯಾಗಿ ಕೆಲಸ ಮಾಡಿದವರನ್ನು ಗುರುತಿಸಿದಾಗ ಆ ಪ್ರಶಸ್ತಿಗೆ ಅರ್ಥ ಬರುತ್ತದೆ. ಅಂತಹ ಕೆಲಸವನ್ನು 25 ವರ್ಷಗಳಿಂದ ವರದಕ್ಷಿಣೆ ವಿರೋಧಿ ವೇದಿಕೆ ಮುನ್ನಡೆಸಿಕೊಂಡು ಬಂದಿರುವುದು ಸ್ವಾಗತಾರ್ಹ. ಇಲ್ಲಿ ಗುರುತಿಸಲ್ಪಟ್ಟಿರುವ ಸಾಲು ಮರದ ತಿಮ್ಮಕ್ಕ, ಸೂಲಗಿತ್ತಿ ನರಸಮ್ಮ ಮೊದಲಾದವರು ರಾಷ್ಟ್ರ ಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪ್ರಶಸ್ತಿಯ ಜೊತೆ ಜೊತೆಗೆ ವೇದಿಕೆಯು ಸಾಂತ್ವನ ಕೇಂದ್ರದ ಮೂಲಕ ಕೌಟುಂಬಿಕ ದೌರ್ಜನ್ಯ ಪ್ರಕರಣಗಳನ್ನು ಇತ್ಯರ್ಥಪಡಿಸುತ್ತಾ ಬಂದಿರುವುದು ಅತ್ಯಂತ ಹೆಮ್ಮೆಯ ವಿಷಯ ಎಂದರು.

ಪ್ರಶಸ್ತಿ ಸ್ವೀಕರಿಸಿದ ಎನ್.ಇಂದಿರಮ್ಮ ಮಾತನಾಡಿ ಜನರ ನಡುವೆ ಇದ್ದು ಕೆಲಸ ಮಾಡಿದಾಗ ಅಂತಹವರಿಗೆ ಪ್ರಶಸ್ತಿಗಳು ಬಂದಾಗ ಅತ್ಯಂತ ಖುಷಿಯಾಗುತ್ತದೆ. ಸಾಮಾಜಿಕ ಬದಲಾವಣೆ ಕೇವಲ ಒಬ್ಬರಿಂದ ಸಾಧ್ಯವಿಲ್ಲ. ಇದು ಸಾಮೂಹಿಕವಾಗಿ ಆಗಬೇಕಿರುವ ಕೆಲಸ. ಪ್ರಸ್ತುತ ಸನ್ನಿವೇಶದಲ್ಲಿ ನಿತ್ಯವೂ ಕೊಲ್ಲುವ ಸಂಸ್ಕೃತಿ, ದೌರ್ಜನ್ಯ, ಅತ್ಯಾಚಾರ, ವಿಕೃತ ಹಿಂಸೆಗಳನ್ನೇ ನೋಡುತ್ತಿದ್ದೇವೆ. ಇಂತಹ ವಿಕೃತಿಗಳನ್ನು ಕೊನೆಗಾಣಿಸಲು ಮಹಿಳೆಯರ ಜೊತೆ ಪುರುಷರೂ ಸೇರಿಕೊಳ್ಳಬೇಕು. ಆಗ ಮಾತ್ರ ಇಂತಹ ಅನಿಷ್ಟಗಳನ್ನು ಕೊನೆಗಾಣಿಸಲು ಸಾಧ್ಯ ಎಂದರು.

ಡಾ.ಜಿ.ಪರಮೇಶ್ವರ್ ಸ್ಥಾಪಿತ ಗಂಗಮಾಳಮ್ಮ ಗಂಗಾಧರಯ್ಯ ನೆನಪಿನ ಮಹಿಳಾ ಚೇತನ ಪ್ರಶಸ್ತಿಯನ್ನು ಕೊರಟಗೆರೆ ತಾಲ್ಲೂಕು ಹೊಸಹಳ್ಳಿಯ ಶ್ರೀದೇವಿ, ದಿ. ಚೆನ್ನಿಗಪ್ಪ ಅವರು ಸ್ಥಾಪಿಸಿರುವ ಚನ್ನಮ್ಮ ಚನ್ನರಾಯಪ್ಪ ನೆನಪಿನ ಮಹಿಳಾ ಸಾಧಕಿ ಪ್ರಶಸ್ತಿಯನ್ನು ಚಿಕ್ಕನಾಯಕನಹಳ್ಳಿಯ ಎನ್.ಇಂದಿರಮ್ಮ ಅವರಿಗೆ, ಸ್ವಾತಂತ್ರ್ಯ ಹೋರಾಟಗಾರ ಟಿ.ಆರ್.ರೇವಣ್ಣ ಅವರು ಪತ್ನಿ ಸರೋಜಮ್ಮ ಹೆಸರಿನಲ್ಲಿ ಸ್ಥಾಪಿಸಿರುವ ಶ್ರಮಜ್ಯೋತಿ ಪ್ರಶಸ್ತಿಯನ್ನು ತುಮಕೂರಿನ ಟಿ.ಸಿ.ಪ್ರೇಮಲತಾ ಅವರಿಗೆ ಪ್ರದಾನ ಮಾಡಲಾಯಿತು. ತಲಾ 5 ಸಾವಿರ ರೂ. ನಗದು, ಪ್ರಶಸ್ತಿ ಫಲಕ ಹಾಗೂ ಸನ್ಮಾನವನ್ನು ಇದು ಒಳಗೊಂಡಿದೆ. ಸಮಾರಂಭದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಟಿ.ಆರ್.ರೇವಣ್ಣ, ಸರ್ಕಾರಿ ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷ ಅನಂತರಾಮಯ್ಯ, ಖಜಾಂಚಿ ನರಸಿಂಹರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.

ಎನ್.ಅಕ್ಕಮ್ಮ, ಪಾರ್ವತಮ್ಮ, ಗಂಗಲಕ್ಷ್ಮಿ ತಂಡದವರು ಮಹಿಳಾ ಜಾಗೃತಿ ಗೀತೆಗಳನ್ನು ಹಾಡಿದರು. ವೇದಿಕೆಯ ಪ್ರಧಾನ ಕಾರ್ಯದರ್ಶಿ ಸಾ.ಚಿ.ರಾಜಕುಮಾರ ಕಾರ್ಯಕ್ರಮ ನಿರೂಪಿಸಿದರು. ನಿವೃತ್ತ ನೌಕರರ ಸಂಘದ ಕಾರ್ಯದರ್ಶಿ ಪುಟ್ಟನರಸಯ್ಯ ವಂದಿಸಿದರು.

ಮೌನ ಕ್ರಾಂತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9449499938

EDITOR: SHIVANANDA G M, 319/276/A, BEHIND GOVT HOSPITAL, KORATAGERE, TQ- KORATAGERE, TUMKUR, KARNATAKA - 572129. PRINTED BY: NAGARAJU A V, NAGARAJU AV SO VEERAKAYTHAIAH AGRAHARA, TUMKUR, KARNATAKA - 572129. PRINTING PRESS ADDRESS: DR B R AMBEDKAR PRINTING PRESS, 1 ST FLOOR, SUVARNA YUGA NEWS, HEAD OFFICE, K.S.R.T.C BUS STAND,KORATAGERE TALUK, TUMKUR, KARNATAKA - 572129. PUBLISHED BY: SHIVANANDA G M, 319/276/A, BEHIND GOVT HOSPITAL, KORATAGERE, TQ- KORATAGERE, TUMKUR, KARNATAKA - 572129.